ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 38 RNI Number : KNKAN/25/A2770 11-02-2026 Wednesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :38 ರಾಯಚೂರು 11-02-2026 ಬುಧವಾರ ಪುಟ 04 ಬೆಲೆ ರೂ.2/- ಮೊ:8660146563

ಗ್ರಾ.ಪಂ ಸದಸ್ಯರು ಅಧಿಕಾರ ಸ್ವೀಕರಿಸಿದ 15 ತಿಂಗಳ ಬಳಿಕ ಅವಿಶ್ವಾಸ ನಿರ್ಣಯಕ್ಕೆ ಅಡ್ಡಿಯಿಲ್ಲ: ಹೈಕೋರ್ಟ್

ಬೆಂಗಳೂರು: ಗ್ರಾಮ ಪಂಚಾಯತ್ ಚುನಾಯಿತ ಸದಸ್ಯರು ಪ್ರಮಾಣವಚನ ಸ್ವೀಕರಿಸಿದ ದಿನಾಂಕದಿಂದ 15 ತಿಂಗಳ ಅವಧಿ ಹೊರತುಪಡಿಸಿ ಯಾವುದೇ ಸಂದರ್ಭದಲ್ಲಿ ಅವಿಶ್ವಾಸ ನಿರ್ಣಯ ಮಂಡಿಸಲು ಅವಕಾಶವಿರಲಿದೆ ಎಂದು ಹೈಕೋರ್ಟ್ ತಿಳಿಸಿದೆ.

ಕೋಲಾರ ಜಿಲ್ಲೆ ಶ್ರೀನಿವಾಸಪುರ ತಾಲೂಕಿನ ಚಲ್ದಿಗಾನಹಳ್ಳಿಯ ಗ್ರಾಮಪಂಚಾತ್ ಅಧ್ಯಕ್ಷರ ವಿರುದ್ಧ ಅವಿಶ್ವಾಸ ನಿರ್ಣಯಕ್ಕೆ ಸಂಬಂಧಿಸಿದಂತೆ ಗ್ರಾಮ ಪಂಚಾಯತ್ ಸದಸ್ಯರ ಮನವಿಯ ಮೇರೆಗೆ ಕೋಲಾರ ಉಪವಿಭಾಗದ ಉಪವಿಭಾಗಾಧಿಕಾರಿ ದಿನಾಂಕ ನಿಗದಿಪಡಿಸಿದ್ದ ಕ್ರಮ ಪ್ರಶ್ನಿಸಿ ಗ್ರಾಮ ಪಂಚಾಯತ್ ಅಧ್ಯಕ್ಷ ಸಿ.ಎನ್. ಶ್ರೀನಿವಾಸ್ ಎಂಬುವರು ಅರ್ಜಿ ಸಲ್ಲಿಸಿದ್ದರು.

ಈ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸೂರಜ್ ಗೋವಿಂದರಾಜು ಅವರಿದ್ದ ನ್ಯಾಯಪೀಠ ಈ ಆದೇಶ ನೀಡಿದ್ದು, ಅರ್ಜಿಯನ್ನು ವಜಾಗೊಳಿಸಿ ಆದೇಶಿಸಿದೆ.

ಗ್ರಾಮ ಪಂಚಾಯತ್ ಸದಸ್ಯರು ಪ್ರಮಾಣವಚನ ಸ್ವೀಕರಿಸಿದ ದಿನಾಂಕದಿಂದ 15 ತಿಂಗಳ ಆರಂಭಿಕ ಅವಧಿಯಲ್ಲಿ ಮಾತ್ರ ಅವಿಶ್ವಾಸ ನಿರ್ಣಯ ಮಂಡಿಸುವುದಕ್ಕೆ ಅವಕಾಶವಿರಲ್ಲ. 15 ತಿಂಗಳ ಬಳಿಕ ಯಾವುದೇ ಸಂದರ್ಭದಲ್ಲಿ ಅವಿಶ್ವಾಸ ನಿರ್ಣಯ ಮಂಡಿಸಬಹುದು ಎಂದು ನ್ಯಾಯಾಲಯ ಹೇಳಿದೆ.

ಆದರೆ, ಅರ್ಜಿದಾರರ ಪರ ವಕೀಲರು ವಾದ ಮಂಡಿಸಿರುವ ಅರ್ಜಿದಾರರು ಅಧ್ಯಕ್ಷರಾವಧಿಯ ಕೊನೆಯ ಹಂತದಲ್ಲಿ ಅವಿಶ್ವಾಸ ಮಂಡನೆ ಮಾಡುವುದಕ್ಕೆ ಸದಸ್ಯರು ಮುಂದಾಗಿದ್ದಾರೆ ಎಂದು ತಿಳಿಸಿದ್ದಾರೆ. ಆದರೆ, ಗ್ರಾಮ ಪಂಚಾಯತ್ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ 15 ತಿಂಗಳ ಬಳಿಕ ಯಾವ ಸಂದರ್ಭದಲ್ಲಾದರೂ ಅವಿಶ್ವಾಸ ನಿರ್ಣಯ ಮಂಡಿಸಬಹುದಾಗಿದೆ ಆದ್ದರಿಂದ ಅರ್ಜಿದಾರರ ವಾದ



ಒಪ್ಪಲಾಗುವುದಿಲ್ಲ ಎಂದು ಪೀಠ ಹೇಳಿತು. ಅಲ್ಲದೆ, ಅವಧಿಯ ಅಂತ್ಯದ ವೇಳೆಯಲ್ಲಿ ಅವಿಶ್ವಾಸ ನಿರ್ಣಯ ಮಂಡಿಸಲು ಅನುಮತಿ ನೀಡುವುದರಿಂದ ಚುನಾಯಿತ ಪದಾಧಿಕಾರಿಗಳ ಉಳಿದ ಅಧಿಕಾರಾವಧಿ ದುರುಪಯೋಗವಾಗಲಿದೆ ಎನ್ನಲಾಗುವುದಿಲ್ಲ ಎಂದು ಪೀಠ ತಿಳಿಸಿದೆ.

ಆದ್ದರಿಂದ ಸದಸ್ಯರ ಮನವಿಯ ಮೇರೆಗೆ ಅವಿಶ್ವಾಸ ನಿರ್ಣಯ ಅಂಗೀಕರಿಸುವ ಸಲುವಾಗಿ ಉಪವಿಭಾಗಾಧಿಕಾರಿಗಳು ಸಭೆ ನಡೆಸಲು ದಿನಾಂಕ ನಿಗದಿ ಮಾಡಿರುವುದಲ್ಲಿ ಯಾವುದೇ ದೋಷ ಕಂಡುಬಂದಿಲ್ಲ ಎಂದು ತಿಳಿಸಿದ ನ್ಯಾಯಪೀಠ, ಹಣಕಾಸಿನ ಅವ್ಯವಹಾರ ಸಂಬಂಧ ಅರ್ಜಿದಾರರ ಆರೋಪಕ್ಕೆ ಸಂಬಂಧ ಪರಿಶೀಲನೆ ನಡೆಸುವುದಕ್ಕಾಗಿ ಸಕ್ಷಮ ಪ್ರಾಧಿಕಾರಕ್ಕೆ ರವಾನಿಸಬೇಕು. ಜತೆಗೆ, ಆದೇಶದ ಪ್ರತಿ ಸಿಕ್ಕ ಏಳು ದಿನಗಳ ಅಕ್ರಮ ಆರೋಪ ಸಂಬಂಧ ಸೂಕ್ತ ಕ್ರಮ ಕೈಗೊಳ್ಳಬೇಕು ಗ್ರಾಮ ಪಂಚಾಯತ್‌ಗೆ ಸೂಚಿಸಿದೆ.

ಪ್ರಕರಣದ ಹಿನ್ನೆಲೆ : ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲೂಕಿನ ಚಲ್ದಿಗಾನಹಳ್ಳಿಯ ಗ್ರಾಮ ಪಂಚಾಯತ್ ಅಧ್ಯಕ್ಷರ ವಿರುದ್ಧ ಅವಿಶ್ವಾಸ ನಿರ್ಣಯ ಕೈಗೊಳ್ಳುವ ಸಂಬಂಧ ಸದಸ್ಯರು ಮನವಿ ಸಲ್ಲಿಸಿದ್ದರು.

ಈ ಮನವಿಯ ಆಧಾರದಲ್ಲಿ 2026ರ ಜನವರಿ 7ರಂದು ಅವಿಶ್ವಾಸ ನಿರ್ಣಯಕ್ಕೆ ಸಭೆ ನಡೆಸುವುದಕ್ಕಾಗಿ ಕೋಲಾರ ಉಪವಿಭಾಗದ ಉಪ ವಿಭಾಗಾಧಿಕಾರಿಗಳು 2025ರ ಡಿಸೆಂಬರ್ 20ರಂದು ನೋಟಿಸ್ ಜಾರಿ ಮಾಡಿದ್ದರು. ಇದನ್ನು ಪ್ರಶ್ನಿಸಿ ಅರ್ಜಿದಾರರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ಪಂಚಾಯತ್‌ನಲ್ಲಿ ಲಭ್ಯವಿರುವ 65 ಲಕ್ಷ ರೂ.ಗಳ ಬಿಡುಗಡೆಗೆ ಸಂಬಂಧ ಕೆಲವು ಸದಸ್ಯರು ಮನವಿ ಮಾಡಿದ್ದರು. ಇದಕ್ಕೆ ಅಧ್ಯಕ್ಷರು ಮಣಿದಿಲ್ಲ. ಇದೇ ಕಾರಣದಿಂದ ಅವರ ವಿರುದ್ಧ ಅವಿಶ್ವಾಸ ನಿರ್ಣಯ ಮಂಡನೆಗೆ ನೋಟಿಸ್ ನೀಡಲಾಗಿದೆ. ಅಲ್ಲದೆ, 2020ರ ಡಿಸೆಂಬರ್ 30ರಂದು ಆಯ್ಕೆಯಾಗಿದ್ದು, ಅವರ ಅವಧಿ ಪೂರ್ಣಗೊಳ್ಳುವ ಸಮಯದಲ್ಲಿ ಅವಿಶ್ವಾಸ ನಿರ್ಣಯಕ್ಕೆ ಮುಂದಾಗದ್ದಾರೆ. ಆದ್ದರಿಂದ ನೋಟಿಸ್ ರದ್ದುಪಡಿಸಬೇಕು ಎಂದು ಕೋರಿದ್ದರು.

ಜಿಲ್ಲಾಡಳಿತ ದಿಂದ ಕಾಯಕ ಶರಣರ ಜಯಂತಿ ಆಚರಣೆ

ಸಮಸಮಾಜ ಕಟ್ಟುವಲ್ಲಿ ಕಾಯಕ ಶರಣರ ಕೊಡುಗೆ ಅಪಾರ: ತಹಶೀಲ್ದಾರ್ ಸುರೇಶ ವರ್ಮಾ



ರಾಯಚೂರು ಫೆ.10

ಮೂಢನಂಬಿಕೆಗಳು, ಜಾತಿ ಪದ್ಧತಿ, ಅಸಮಾನತೆಯ ವಿರುದ್ಧ ವಚನಗಳ ಮೂಲಕ ಜನರಲ್ಲಿ ಜಾಗೃತಿ ಮೂಡಿಸಿ, ಸಮಸಮಾಜ ಕಟ್ಟುವಲ್ಲಿ ಕಾಯಕ ನಿಷ್ಠೆ ಮೆರೆದ ಕಾಯಕ ಶರಣರ ಕೊಡುಗೆ ಅಪಾರ ಎಂದು ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಅವರು ಹೇಳಿದರು.

ಫೆ.10ರ ಮಂಗಳವಾರ ದಂದು ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಕಾಯಕ ಶರಣರ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸರಳ ಜೀವನ, ಶುದ್ಧ ಧ್ಯಾನ, ನಿಷ್ಕಲ್ಮಶ ಭಕ್ತಿ ಮಾರ್ಗದಿಂದ ಮುಕ್ತಿ ಸಾಧ್ಯವೆಂದು ಸಾರಿದ ಕಾಯಕ ಶರಣರ ವಚನಗಳು ಇಂದಿಗೂ ಚಿರಪರಿಚಿತವಾಗಿವೆ ಎಂದರು.

ಈ ವೇಳೆ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಡಾ.ಶರಣಪ್ಪ ಅವರು ಮಾತನಾಡಿ, ಶರಣದ ವಚನಗಳು ಇಂದಿನ ಆಧುನಿಕ ಯುಗದಲ್ಲಿ ಅತ್ಯವಶ್ಯಕವಾಗಿವೆ. ಯುವ ಪೀಳಿಗೆ ಅವರ ಆದರ್ಶಗಳನ್ನು ಪಾಲಿಸಿ ಮುನ್ನಡೆಯಬೇಕಿದೆ ಎಂದರು.

ಈ ವೇಳೆ ಉಪನ್ಯಾಸಕರಾಗಿ ಯುವ ಸಾಹಿತಿಗಳಾದ ಈರಣ್ಣ ಬೆಂಗಾಲಿ ಅವರು ಮಾತನಾಡಿ, 12ನೇ ಶತಮಾನವು ಧಾರ್ಮಿಕ, ಸಾಮಾಜಿಕ, ರಾಜಕೀಯವಾಗಿ ಕ್ರಾಂತಿ ಉಂಟು ಮಾಡಿದೆ. ಇವತ್ತಿನ ನಮ್ಮ ಸಂವಿಧಾನದ ಪಾರ್ಲಿಮೆಂಟ್ ಮಾದರಿಯಲ್ಲಿ ಅಂದಿನ ಅನುಭವ ಮಂಟಪ ಇತ್ತು.

3ನೇ ಪುಟಕ್ಕೆ


ಸಾರಿಗೆ ಬಸ್-ಟಂಟಂ ಮುಖಾಮುಖಿ ಢಿಕ್ಕಿ : ಗರ್ಭಿಣಿ ಸೇರಿ ಇಬ್ಬರು ಮೃತ್ಯು, 14 ಜನರಿಗೆ ಗಾಯ

ದೇವದುರ್ಗ: ತಾಲೂಕಿನ ಕರಿಗುಡ್ಡ ಗ್ರಾಮ ಸಮೀಪ ಮಂಗಳವಾರ ಮಧ್ಯಾಹ್ನ ಸಾರಿಗೆ ಬಸ್ ಮತ್ತು ಟಂಟಂ ಆಟೋ ನಡುವೆ ಸಂಭವಿಸಿದ ಮುಖಾಮುಖಿ ಅಪಘಾತದಲ್ಲಿ ಗರ್ಭಿಣಿ ಮಹಿಳೆ ಸೇರಿ ಇಬ್ಬರು ಮೃತಪಟ್ಟಿದ್ದು, 14 ಮಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ.

ದೇವದುರ್ಗ ಪಟ್ಟಣದತ್ತ ಬರುತ್ತಿದ್ದ ಟಂಟಂ ವಾಹನ ಕರಿಗುಡ್ಡ ತಿರುವಿನಲ್ಲಿ ಬಸ್‌ಗೆ ಢಿಕ್ಕಿ ಹೊಡೆದು ಪಲ್ಟಿಯಾಗಿದ್ದು, ಆಟೋದಲ್ಲಿದ್ದ ಗರ್ಭಿಣಿ ಮೋನಮ್ಮ (25) ಹಾಗೂ ಮಲ್ಲಪ್ಪ (50) ಗಂಭೀರವಾಗಿ ಗಾಯಗೊಂಡರು. ಆಸ್ಪತ್ರೆಗೆ ದಾಖಲಿಸಿದರೂ ಚಿಕಿತ್ಸೆ ಫಲಕಾರಿಯಾಗದೆ ಇಬ್ಬರೂ ಮೃತಪಟ್ಟಿದ್ದಾರೆ ಎಂದು ತಿಳಿದು ಬಂದಿದೆ.

ಮೃತ ಮೋನಮ್ಮ ಸಿರವಾರ ತಾಲೂಕಿನವರಾಗಿದ್ದು, ತವರು ಮನೆ ಕರಿಗುಡ್ಡ





ಗ್ರಾಮಕ್ಕೆ ಬಂದಿದ್ದರು. ಒಂಬತ್ತು ತಿಂಗಳ ಗರ್ಭಿಣಿಯಾಗಿದ್ದ ಅವರು ಸ್ಕ್ಯಾನಿಂಗ್ ತಪಾಸಣೆಗೆ ಕುಟುಂಬಸ್ಥರೊಂದಿಗೆ ದೇವದುರ್ಗಕ್ಕೆ ಬರುತ್ತಿದ್ದ ವೇಳೆ ದುರ್ಘಟನೆ ಸಂಭವಿಸಿದೆ. ಹೊಟ್ಟೆಗೆ ಬಲವಾದ ಪೆಟ್ಟು ಬಿದ್ದ ಪರಿಣಾಮ ಗರ್ಭದಲ್ಲಿದ್ದ ಮಗು ಕೂಡ ಮೃತಪಟ್ಟಿದೆ. ಮೊದಲು ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಬಳಿಕ ಹೆಚ್ಚಿನ ಚಿಕಿತ್ಸೆ ಗಾಗಿ ರಾಯಚೂರಿನ ರಿಮ್ಸ್ ಆಸ್ಪತ್ರೆಗೆ ರವಾನಿಸಿದರೂ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ ಎಂದು ತಿಳಿದು ಬಂದಿದೆ.

ಮಲ್ಲಪ್ಪ ಅವರನ್ನು ಸ್ಥಳೀಯ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಿಸದೇ ಅವರು ಸಹ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ.

ಅಪಘಾತದಲ್ಲಿ ರೋಹಿತ್ (5) ಎಂಬ ಬಾಲಕನಿಗೆ ಮೂಗಿಗೆ ತೀವ್ರ ಗಾಯವಾಗಿದ್ದು, ಜಿಲ್ಲಾಸ್ಪತ್ರೆಗೆ ಕಳುಹಿಸಲಾಗಿದೆ. ಟಂಟಂ ವಾಹನದಲ್ಲಿದ್ದ ದುರಗಪ್ಪ, ಬಾಲಪ್ಪ, ಬಾಳಪ್ಪ, ಶಿವಮ್ಮ, ರೇಣುಕಾ, ಅರಣಕುಮಾರ, ಶಿವರಾಜ ಸೇರಿದಂತೆ ಇತರರು ಗಾಯಗೊಂಡಿದ್ದು, ಸ್ಥಳೀಯ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ವಾಹನ ಚಾಲಕ ದುರಗಪ್ಪಗೆ ಕೈ-ಕಾಲಿಗೆ ಗಂಭೀರ ಪೆಟ್ಟಾಗಿದ್ದು ಚಿಕಿತ್ಸೆ ನೀಡಲಾಗುತ್ತಿದೆ.

ಘಟನೆ ಕುರಿತು ದೇವದುರ್ಗ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಆಸ್ಪತ್ರೆಗೆ ಶಾಸಕಿ, ಹೆಚ್ಚುವರಿ ಎಸ್ಪಿ ಭೇಟಿ :

3ನೇ ಪುಟಕ್ಕೆ

ಶ್ರೀಶೈಲಂ ಜಾತ್ರೆಯ ಅಂಗವಾಗಿ ವಿಶೇಷ ಬಸ್ಸುಗಳ ಕಾರ್ಯಾಚರಣೆ

ರಾಯಚೂರು ಫೆ.10-

ದಿನಾಂಕ: 19.02.2025 ರಿಂದ 01.03.2025ರವರೆಗೆ ಶ್ರೀ ಶೈಲಂ ಜಾತ್ರೆಯು ನಡೆಯುತ್ತಿದ್ದು, ದಿನಾಂಕ: 27.02.2025 ರಂದು ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ ಶ್ರೀಶೈಲ ಶ್ರೀ ಮಲ್ಲಿಕಾರ್ಜುನ ಸ್ವಾಮಿಯ ರಥೋತ್ಸವ ಜರುಗಲಿದೆ. ಈ ಜಾತ್ರೆಗೆ ಪ್ರತಿ ವರ್ಷದಂತೆ ಈ ವರ್ಷವು ಸಹ ರಾಯಚೂರು ವಿಭಾಗದ ವ್ಯಾಪ್ತಿಯಲ್ಲಿ ಬರುವ ರಾಯಚೂರು, ಲಿಂಗಸೂಗುರು, ಸಿಂಧನೂರು, ಮಾನವಿ, ದೇವದುರ್ಗ, ಮಸ್ಕಿ ಘಟಕಗಳಿಂದ ವಿಶೇಷ ಬಸ್ಸು ಗಳನ್ನು ಕಾರ್ಯಾಚರಣೆಗೆ ತರಲಾಗುತ್ತಿದೆ.

ಈ ಬಸ್ಸು ಗಳು ದಿನಾಂಕ: 19.02.2025 ರಿಂದ 01.03. 2025ರವರೆಗೆ ರಾಯಚೂರು-ಕರ್ನೂಲ್-ಶ್ರೀಶೈಲಂ, ಸಿಂಧನೂರು-ಆದೋನಿ-ಶ್ರೀಶೈಲ, ಸಿಂಧನೂರು- ರಾಯಚೂರು- ಕರ್ನೂಲ್-ಶ್ರೀಶೈಲ, ಲಿಂಗಸೂಗುರು-ರಾಯಚೂರು-ಕರ್ನೂಲ್-ಶ್ರೀಶೈಲ, ಲಿಂಗಸೂಗುರು-ಮಸ್ಕಿ-ಸಿಧನೂರು-ಆದೋನಿ-ಶ್ರೀಶೈಲ, ಮಾನವಿ-ರಾಯಚೂರು-ಕರ್ನೂಲ್- ಶ್ರೀಶೈಲಂ, ದೇವದುರ್ಗ- ರಾಯಚೂರು- ಕರ್ನೂ ಲ್- ಶ್ರೀಶೈಲ, ಮಸ್ಕಿ-ರಾಯಚೂರು- ಕರ್ನೂಲ್- ಶ್ರೀಶೈಲಂ, ಮಸ್ಕಿ-ಸಿಂಧನೂರು- ಆದೋನಿ- ಶ್ರೀಶೈಲ ಮಾರ್ಗದಲ್ಲಿ ಕಾರ್ಯಾಚರಣೆಗೆ ತರಲಾ ಗುತ್ತಿದೆ.

50 ಪ್ರಯಾಣಿಕರು ಲಭ್ಯವಿದ್ದಲ್ಲಿ ಅವರ ಸ್ವ-ಸ್ಥಳದಿಂದ ನೇರವಾಗಿ ಶ್ರೀಶೈಲಂಗೆ ಬಸ್ಸು ವ್ಯವಸ್ಥೆಯನ್ನು ಒದಗಿಸುವದಕ್ಕೆ ಕ್ರಮವನ್ನು ತೆಗೆದುಕೊಳ್ಳಲಾಗಿದೆ. ಹಾಗೂ ಪ್ರಯಾಣಿಕರು ಮಹಾನಂದಿಗೆ ಹೋಗುವದಕ್ಕೆ ಇಷ್ಟ ಪಟ್ಟಲ್ಲಿ ಅಲ್ಲಿಗೆ ಕರೆದುಕೊಂಡು ಹೋಗಿ ಬರಲಾಗುತ್ತದೆ. ಶ್ರೀಶೈಲಂಗೆ ಹೋಗಿ ಬರುವ ಪ್ರಯಾಣಿಕರು, ಈ ವಿಶೇಷ ಬಸ್ಸು ಗಳ ಸೌರ್ಕಯವನ್ನು ಪಡೆದುಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ 1ನೇ ಘಟಕ ರಾಯ

3ನೇ ಪುಟಕ್ಕೆ

ರಾಷ್ಟ್ರೀಯ ಜಂತುಹುಳು ನಿವಾರಣಾ ಕಾರ್ಯಕ್ರಮಕ್ಕೆ ಚಾಲನೆ

ಜಂತುಹುಳು ದೇಹಕ್ಕೆ ಪ್ರವೇಶವಾಗದಂತೆ ಎಚ್ಚರಿಕೆ ವಹಿಸಿ: ಈಶ್ವರ ಕುಮಾರ

ರಾಯಚೂರು ಫೆ.10

ಜಂತುಹುಳು ಬಾಧೆಯಿಂದ ರಕ್ತಹೀನತೆ, ಅಪೌಷ್ಟಿಕತೆ ಉಂಟಾಗಿ ದೈಹಿಕ ಬೆಳವಣಿಗೆ ಕುಂಠಿತವಾಗುವುದರಿದ ಜಂತುಹುಳು ದೇಹಕ್ಕೆ ಪ್ರವೇಶವಾಗದಂತೆ ಎಚ್ಚರಿಕೆ ವಹಿಸುವುದು ಅಗತ್ಯ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ಹೇಳಿದರು.

ಫೆ.10ರ ಮಂಗಳವಾರ ದಂದು ನಗರದ ಕೆ.ಇ.ಬಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ, ರಾಜಮಾನಗಡ್ಡಾ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಸಹಯೋಗದೊಂದಿಗೆ ನಡೆದ ರಾಷ್ಟ್ರೀಯ ಜಂತುಹುಳು ನಿವಾರಣಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪ್ರತಿಯೊಬ್ಬರೂ ಆರೋಗ್ಯಯುತವಾಗಿದ್ದಲ್ಲಿ ಸದೃಢ



ಸಮಾಜ ಕಾಣಲು ಸಾಧ್ಯ. ಆ ನಿಟ್ಟಿನಲ್ಲಿ ಶುಚಿತ್ವಕ್ಕೆ ಹೆಚ್ಚಿನ ಒತ್ತು ನೀಡಬೇಕಿದೆ. ಜಂತುಹುಳು ದೇಹಕ್ಕೆ ಪ್ರವೇಶಿಸುವುದರಿಂದ ಅನೇಕ ರೋಗಗಳಿಗೆ ತುತ್ತಾಗಬೇಕಾಗುತ್ತದೆ. ಆದ್ದರಿಂದ ಈ ಬಗ್ಗೆ ಎಚ್ಚರಿಕೆ ವಹಿಸಬೇಕಿದೆ. ಈ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ನಾನಾ ಇಲಾಖೆಗಳು ಕೈಜೋಡಿಸಬೇಕೆಂದರು.

ರಕ್ತಹೀನತೆ ನಿಯಂತ್ರಣಕ್ಕಾಗಿ ಜಂತುಹುಳುಗಳ ನಿವಾರಣೆಗಾಗಿ ಆಲ್ಬೆಂಡೋಜೋಲ್ ಮಾತ್ರೆಗಳನ್ನು ಶಾಲಾ ಮಕ್ಕಳು, ಅಂಗನವಾಡಿ ಮಕ್ಕಳು ಸೇರಿದಂತೆ ಎಲ್ಲ ಮಕ್ಕಳಿಗೂ ತಪ್ಪದೆ ಚಿಪಿಸುವ ದಿಶೆಯಲ್ಲಿ ನಿಗಾವಹಿಸಬೇಕು ಎಂದರು.

ಜಿಲ್ಲೆಯಾದ್ಯತ ಐದು ತಾಲೂಕಿನ 2,737 ಅಂಗನವಾಡಿ ಕೇಂದ್ರಗಳು, 2,448 ಶಾಲೆಗಳಲ್ಲಿ, ಕಾಲೇಜು, ತಾಂತ್ರಿಕ ವಿದ್ಯಾಲಯ ಸೇರಿದಂತೆ 1 ವರ್ಷದಿಂದ 19 ವರ್ಷದೊಳಗಿನ 7,33,702 ಮಕ್ಕಳಿಗೆ ಮಾತ್ರೆಗಳನ್ನು ಊಟ ಅಥವಾ ಉಪಹಾರ ಸೇವಿಸಿದ ನಂತರ ತಪ್ಪದೆ ಸೇವಿಸಲು ಆರೋಗ್ಯ ಇಲಾಖೆ ಹಾಗೂ ಮುಂಚೂಣಿ ಇಲಾಖೆಗಳಿಂದ ಜಾಗೃತಿಯನ್ನು

3ನೇ ಪುಟಕ್ಕೆ

ನೂತನ ದೇವಸೂಗೂರು ಮಂಡಲ ಅಧ್ಯಕ್ಷರಾದ ಶರಣಪ್ಪ ನಾಮಾಲಿ ಅವರ ಪದಗ್ರಹಣ ಕಾರ್ಯಕ್ರಮ

ರಾಯಚೂರು,ಫೆ.09- ರಾಜ್ಯ ಕಾಂಗ್ರೆಸ್ ಸರ್ಕಾರ ಗಾಂಧಿ ಹೆಸರಲ್ಲಿ ವ್ಯಾಪಾಕ ಭ್ರಷ್ಟಾಚಾರ ಮಾಡುತ್ತಿದ್ದು, ದೇಶದಲ್ಲಿ ಇರುವ ಕಾಂಗ್ರೆಸ್ ಮಹಾತ್ಮಾ ಗಾಂಧಿ ಕಾಂಗ್ರೆಸ್ ವಲ್ಲ ಅದು ನಕಲಿ ಗಾಂಧಿ ಆಗಿದೆ ಎಂದು ಬಿಜೆಪಿ ವಿರೋಧಿ ಪಕ್ಷದ ನಾಯಕರಾದ ಛಲುವಾದಿ ನಾರಾಯಣಸ್ವಾಮಿ ಅವರು ಹೇಳಿದರು.

ಅವರಿಂದು ತಾಲೂಕಿನ ದೇವಸೂಗೂರು ಗ್ರಾಮದ ಶ್ರೀ ಸೂಗೂರೇಶ್ವರ ದೇವಸ್ಥಾನದ ಆವರಣದಲ್ಲಿ ಭಾರತೀಯ ಜನತಾ ಪಾರ್ಟಿ ಗ್ರಾಮೀಣ ಮಂಡಲ ವತಿಯಿಂದ ಆಯೋಜಿಸಿದ್ದ ನೂತನ ದೇವಸೂಗೂರು ಮಂಡಲ ಅಧ್ಯಕ್ಷರಾದ ಶರಣಪ್ಪ ನಾಮಾಲಿ ಅವರ ಪದಗ್ರಹಣ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಆಡಳಿತ ಬಂದ ನಂತರ ಒಂದೇ ಒಂದು ಅಭಿವೃದ್ಧಿ ಕಾರ್ಯ ನಡೆದಿಲ್ಲ. ಕೇವಲ ಗಾಂಧಿ ಹೆಸರಲ್ಲಿ ಸಂಪೂರ್ಣ ಭ್ರಷ್ಟಾಚಾರದಲ್ಲಿ ತೊಡಗಿದೆ. ಸ್ವರಾಜ್ಯ ಕನಸು ಹೆಸರಲ್ಲಿ ಲೂಟ ಮಾಡುತ್ತಿರುವ ಕಾಂಗ್ರೆಸ್



ಕಂಡಿದ್ದ ಮಹಾತ್ಮ ಗಾಂಧೀಜಿ ಅವರ ಹೆಸರಲ್ಲಿ ಕಾಂಗ್ರೆಸ್ ಭ್ರಷ್ಟಾಚಾರದಲ್ಲಿ ಗುರುತಿಸಿಕೊಂಡಿದೆ. ಭ್ರಷ್ಟಾಚಾರವೇ ಕಾಂಗ್ರೆಸ್ಗೆ ಶಿಷ್ಟಾಚಾರವಾಗಿದೆ ಎಂದು ತೀವ್ರ ವಾಗ್ದಾಳಿ ನಡೆಸಿದರು. ಗಾಂಧಿ ದೇಶದಲ್ಲಿ ಕೇವಲ ಮೂರು ರಾಜ್ಯಗಳು ಮಾತ್ರ ಸೀಮಿತಗೊಳಿಸಲಾಗಿದೆ. ದೇಶದಲ್ಲಿ ಕಾಂಗ್ರೆಸ್ ಹೈಕಮಾಂಡ್ಗೆ ಕರ್ನಾಟಕ ಎಟಿಎಂ ಆಗಿದೆ.ಸರಕಾರದ ಬ್ರಹ್ಮಾಂಡ ಭ್ರಷ್ಟಾಚಾರವು

3ನೇ ಪುಟಕ್ಕೆ

ಇಂದು ಜಿಲ್ಲಾದ್ಯಾಂತ ಲಾರಿ ಮುಷ್ಕರ

ರಾಯಚೂರು ಫೆ.10-

ಕಾನೂನು ಬಾಹಿರವಾಗಿ ಲೋಡಿಂಗ್ ಆನ್ ಲೋಡಿಂಗ್ ವಾರ್ನಿ ಮಾಮೂಲಿ ಟಪಾಲ್ ಮಾಮೂಲಿ, ವೇ ಬ್ರಿಡ್ಜ್ ಹಣ, ತೂಕದಲ್ಲಿ ಕಡಿತ ಸೇರಿ ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ನಾಳೆ ಜಿಲ್ಲಾದ್ಯಂತ ಲಾರಿ ಮುಷ್ಕರ ನಡೆಯಲಿದೆ.



ಲಾರಿ ಮಾಲೀಕರಿಗೆ ಆಗುತ್ತಿರುವ ಅನ್ಯಾಯದ ಕುರಿತು ಈಗಾಗಲೇ ದಿ ಜನವರಿ 14 ರಂದು ನಮಗೆ ಆಗುತ್ತಿರುವ ಅನ್ಯಾಯವನ್ನು ಪರಿಹರಿಸಲು ಮನವಿ ಸಲ್ಲಿಸಲಾಗಿತ್ತು.

ಇಲ್ಲವಾದಲ್ಲಿ ಜನವರಿ 22 ರಂದು ಜಿಲ್ಲಾದ್ಯಾಂತ ಲಾರಿ ಮುಷ್ಕರ ಹಮ್ಮಿಕೊಂಡಿದ್ದು, ಆದರೆ ದಿ20ರಂದು ಗಂಜ್ ಮರ್ಚೆಂಟ್ಸ್, ಅಸೋಸಿಯೇಷನ್ ಕಾರ್ಯಾಲಯದಲ್ಲಿ ಲಾರಿ ಓನರ್ಸ್ ವೆಲ್ಫೇರ್ ಅಸೋಸಿಯೇಷನ್ ಅಧ್ಯಕ್ಷರು ಮತ್ತು ಪದಾಧಿಕಾರಿಗಳು, ರಾಯಚೂರು ಗೂಡ್ಸ್ ಟ್ರಾನ್ಸ್ ಪೋರ್ಟ್ ಅಸೋಸಿಯೇಷನ್ ಅಧ್ಯಕ್ಷರು ಮತ್ತು ಮತ್ತು ಪದಾಧಿಕಾರಿಗಳು ಹಾಗೂ ಕೈಗಾರಿಕದವರು, ವರ್ತಕತರ ನಡುವೆ ಚರ್ಚೆ ನಡೆಸಿ ಗಣರಾಜ್ಯೋತ್ಸವ ಮತ್ತು ರಾಯಚೂರು ಉತ್ಸವ ಇರುವ ಕಾರಣ ದಿ.10 ಗತಿಸಿದರೂ ನಮಗೆ ಯಾವುದೇ ರೀತಿ ಸ್ಪಂದಸದೇ ನಮ್ಮ ಸಮಸ್ಯೆಯನ್ನು ಬಗೆಹರಿಸಿರುವುದಿಲ್ಲ.

ಕಾರಣ ಲಾರಿ ಓನರ್ಸ್ ವೆಲ್ಫೇರ್ ಆಸೋಸಿಯೇಷನ್ ಮತ್ತು ರಾಯಚೂರು ಗೂಡ್ಸ್ ಟ್ರಾನ್ಸ್ ಪೋರ್ಟ್ ಅಸೋಸಿಯೇಷನ್ ವತಿಯಿಂದ ದಿ.11 ರಂದು ನಗರದಲ್ಲಿ ಲೋಡಿಂಗ್ ಆನ್‌ಲೋಡಿಂಗ್ ಬಂದ್ ಮಾಡುವ ಮೂಲಕ ಬೃಹತ್ ಲಾರಿ ಮುಷ್ಕರ ನಡೆಸಲಾಗುವುದು ಎಂದು ಸೈಯದ್ ಹಸನ್ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಲಾರಿ ಓನರ್ ವೆಲ್ಫೇರ್ ಅಸೋಸಿಯೇಶನ್ ಸಂಘದ ಗೌರವಾಧ್ಯಕ್ಷ ನಾಗರಾಜ ಬಾಲಚೇಡ, ಅಧ್ಯಕ್ಷ ಸೈಯದ್ ಹಸನ್ ಅಧ್ಯಕ್ಷರು, ಉಪಾಧ್ಯಕ್ಷ ಅಜೀಂ ಪಾಷ, ಉಪಾಧ್ಯಕ್ಷ ಮಹ್ಮದ್‌ಎಜಾದ್ ಹುದ್ದೀನ್, ಕಾರ್ಯಧ್ಯಕ್ಷ ಮಹ್ಮದ್ ರೈಯಸ್, ಕಾರ್ಯಧ್ಯಕ್ಷ ತಫೀಕ್ ಹುಸೇನಿ , ಜಂಟಿ ಕಾಯದರ್ಶಿ ಮಹ್ಮದ್ ಖತ್ತುಬುದ್ದೀನ್, ಖಜಾಂಚಿ ಸೈಯದ್ ಷರೀಪ್, ನಿರ್ದೇಶಕರು ಸೈಯದ್ ಯೂನಿಸ್ ಸಲೀಂ ಹಾಗೂ ರಾಯಚೂರು ಗೂಡ್ಸ್ ಟ್ರಾನ್ಸ್ ಪೋರ್ಟ್ ಆಸೋಯೇಷನ್ ಸಂಘದ ಅಧ್ಯಕ್ಷ ಶಿವಶರಣಪ್ಪ, ಉಪಾಧ್ಯಕ್ಷರಾದ ಹೆಚ್.ಎಂ.ಶೇಖರ ಆರ್.ಚಂದ್ರಶೇಖರ್, ಕಾರ್ಯದರ್ಶಿ ಎಂ.ಡಿ.ಎಕ್ಬಾಲ್, ಸಹ ಕಾರ್ಯದರ್ಶಿ ಸತ್ಯರೆಡ್ಡಿ,ಖಜಾಂಚಿ ಮಹ್ಮದ್ ಜಾವೀದ್ ಹುಸೇನ್ ರಾಜೇಂದ್ರ, ಗಂಜ್ ಬೆಲ್ಲಂ ಕಾಂಪ್ಲೆಕ್ಸ್ 9902044429 ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿ.ಪಂ ಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ

ಸಿಜರಿನ್ ಬೇಡ, ಸಹಜ ಹೆರಿಗೆ ಇರಲಿ : ಮೊಹಮ್ಮದ ಮೊಹಿಸಿನ್



ಬಾಗಲಕೋಟೆ,ಫೆ.10-

ಜಿಲ್ಲೆಯ ಖಾಸಗಿ ಆಸ್ಪತ್ರೆಗಳಲ್ಲಿ ಪ್ರತಿಶತ 80% ಕ್ಕಿಂತ ಹೆಚ್ಚಿನ ಪ್ರಮಣಾದಲ್ಲಿ ಸಿಜರೀನ್ ಹೆರಿಗೆ ಮಾಡಲಾಗುತ್ತಿದ್ದು, ಅಧಿಕ ಪ್ರಮಾಣದಲ್ಲಿ ಸಿಜರೀನ್ ಹೆರಿಗೆಗಳನ್ನು ಮಾಡುವಂತಹ ಆಸ್ಪತ್ರೆಗಳನ್ನು ಗುರುತಿಸಿ, ಅಲ್ಲಿ ಬಿಗಿ ಕ್ರಮಗಳನ್ನು ಕೈಗೊಳ್ಳಬೇಕು ಎಂದು ವೈದ್ಯಕೀಯ ಶಿಕ್ಷಣ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಯೂ ಆಗಿರುವ ಮೊಹಮ್ಮದ ಮೊಹಿಸಿನ್ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತ್ ನೂತನ ಸಭಾಂಗಣದಲ್ಲಿ ಸೋಮವಾರದಂದು ಜರುಗಿದ ತೃತೀಯ ಮಾಸಿಕ ಕೆ ಡಿ ಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಜಿಲ್ಲೆಯ ಸರಕಾರಿ ತಾಲೂಕು ಆಸ್ಪತ್ರೆ ಹಾಗೂ ಜಿಲ್ಲಾಸ್ಪತ್ರೆಗಳಲ್ಲಿ ಪ್ರತಿಶತ 40 ಅಥವಾ 48 % ರಷ್ಟು ಮಾತ್ರ ಸಿಜರೀನ್ ಆದರೆ ಖಾಸಗಿ ಆಸ್ಪತ್ರೆಗಳಲ್ಲಿ ಇದರ ಎರಡು ಪಟ್ಟು ಅಧಿಕ ಸಿಜರೀನ್ ಹೆರಿಗೆಗಳಾಗುತ್ತವೆ. ಈ ನಿಟ್ಟಿನಲ್ಲಿ ಖಾಸಗಿ ಆಸ್ಪತ್ರೆಗಳ ಮೇಲೆ ಹಿಡಿತವಿರಲಿ. ಅಲ್ಲದೇ ಭ್ರೂಣ ಹತ್ಯೆಯಂತಹ ದೂರುಗಳು ಸಹ ಮತ್ತೆ ಕೇಳಿ ಬರುತ್ತಿರುವದರಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ವಿಶೇಷವಾಗಿ ಜಮಖಂಡಿ, ಮುಧೋಳ, ಮಹಾಲಿಂಗಪೂರ ಸುತ್ತ ಮುತ್ತಲಿನ ಪ್ರದೇಶಗಳತ್ತ ಗಮನ ಹರಿಸುವ ಕಾರ್ಯ ಮಾಡಬೇಕು ಎಂದರು.

ಸರ್ವೋಚ್ಚ ನ್ಯಾಯಾಲಯ ಆದೇಶದ ಅನ್ವಯ ಬೀದಿ ನಾಯಿ ಹಾವಳಿಗೆ ಕ್ರಮ ಕೈಗೊಳ್ಳಿ. ಜಿಲ್ಲೆಯಲ್ಲಿ ಬೀದಿ ನಾಯಿಗಳ ಹಾವಳಿಯಿಂದ ಮಕ್ಕಳು ಮತ್ತು ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸಾಕಷ್ಟು ಸುದ್ದಿಯಾಗಿದೆ. ಈ ನಿಟ್ಟಿನಲ್ಲಿ ಸ್ಥಳಿಯ ಸಂಸ್ಥೆಗಳು ಮತ್ತು ಪಶು ಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಅಧಿಕಾರಿಗಳು ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳಬೇಕು ಮತ್ತು ಬೀದಿ ನಾಯಿಗಳಿಗೆ ಸಂತಾನ ಹರಣ ಶಸ್ತ್ರ ಚಿಕಿತ್ಸೆ ಮಾಡಿಸಲು ಯೋಜನೆ ರೂಪಿಸಿಕೊಂಡು, ಶೀಘ್ರದಲ್ಲಿ ಟೆಂಡರ್ ಕರೆದು ಸಮಸ್ಯೆ ಬಗೆ ಹರಿಸಿಕೊಳ್ಳಬೇಕು ಎಂದು ಹೇಳಿದರು.

ಜಿಲ್ಲಾಧಿಕಾರಿ ಸಂಗಪ್ಪ ಅವರು ಮಾತನಾಡಿ ಬಿ ಸಿ ಎಂ ಹಾಗೂ ಸಮಾಜ ಕಲ್ಯಾಣ ಇಲಾಖೆ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಸ್ಟೇಲ್‌ಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ವಸತಿ ನಿಲಯಗಳಲ್ಲಿ ಸಾಕಷ್ಟು ಲೋಪದೋಷಗಳಿರುವುದು ಕಂಡು ಬಂದಿರುತ್ತದೆ, ಬಸ್ ನಿಲ್ದಾಣಗಳಲ್ಲಿ ಸಹ ಅಸ್ತವ್ಯಸ್ಥಗಳು ಕಂಡು ಬಂದಿದ್ದು, ಪತ್ರಕರ್ತರು ಇವುಗಳತ್ತ ಗಮನಹರಿಸಿ ಎಂದು ತಿಳಿಸುತ್ತಿದ್ದರಿಂದ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಆಧ್ಯತೆ ಮೇರೆಗೆ ಎಲ್ಲವನ್ನು ಸರಿ ಪಡಿಸುವ ಕೆಲಸ ಮಾಡಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ್ ಮಾತನಾಡಿ ಎಲ್ಲ ಅಧಿಕಾರಿಗಳು ಎಸ್‌ಸಿಪಿ ಮತ್ತು ಟಿಎಸ್‌ಪಿ ಕಾಯಿದೆ ಸರಿಯಾಗಿ ತಿಳಿದುಕೊಳ್ಳಿ ಅದರಂತೆ ಕಾರ್ಯನಿರ್ವಹಿಸಿ, ವಿನಾಕಾರಣ ಅನುದಾನ ಹಿಂತುರುಗಿ ಹೋಗದಂತೆ ನೋಡಿಕೊಳ್ಳಿ, ಅಂಗನವಾಡಿಗಳಿಗೆ ನಿಗದಿತ ಸಮಯಕ್ಕೆ ಹಾಲಿನ ಪೌಡರ್ ಪೂರೈಕೆಯಾಗಬೇಕು, ಮಕ್ಕಳು ಮೊಟ್ಟೆ ಸೇವಿಸುವಂತೆ ತಿಳುವಳಿಕೆ ನೀಡಬೇಕು ಮುಖ್ಯವಾಗಿ ಪಾಲಕರಲ್ಲಿ ಮೊಟ್ಟೆಯಲ್ಲಿ ಪೊಶಕಾಂಶಗಳಿರುತ್ತವೆ ಎಂಬುದನ್ನು ಮನವರಿಕೆ ಮಾಡಿ, ಶಾಲೆಗಳು ಮತ್ತು ಅಂಗನವಾಡಿ ಸುತ್ತ ಮುತ್ತ ವಿದ್ಯುತ್ ತಂತಿಗಳು ಜೋತಾಡುತ್ತಿದ್ದರೆ ಆಧ್ಯತೆ ಮೇರೆಗೆ ತೆರವು ಮಾಡಿ ಯಾವುದೇ ಅವಘಡಗಳು ಸಂಭವಿಸದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಿ ಎಂದು ಹೆಸ್ಕಾಂ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಎನ್.ವಾಯ್. ಬಸರಿಗಿಡದ, ಮುಖ್ಯ ಲೆಕ್ಕಾಧಿಕಾರಿ ಸಿದ್ರಾಮೇಶ್ವರ ಉಕ್ಕಲಿ, ಯೋಜನಾ ನಿರ್ದೇಶಕ ಅಲ್ಲಮಪ್ರಭು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

20 ರಂದು ಸಂತ ಕವಿ ಸರ್ವಜ್ಞ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ಧಾರ

ಕಲಬುರಗಿ, ಫೆ.10-

ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಸಂತ ಕವಿ ಸರ್ವಜ್ಞ ಜಯಂತಿಯನ್ನು ಫೆಬ್ರವರಿ 20 ರಂದು ಅರ್ಥಪೂರ್ಣ ಆಚರಿಸಲು ಜಿಲ್ಲಾಧಿಕಾರಿ ಕಚೇರಿ ಸಹಾಯಕರಾದ ಶಿವಪ್ರಭು ಹಿರೇಮಠ ಅವರ ಸಭೆಯಲ್ಲಿ ನಿರ್ಧರಿಸಲಾಯಿತು.

ಶ’ನಿವಾರ’ದ’ಂದ’ು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿ, ಇದೇ ಫೆಬ್ರವರಿ 20 ರಂದು ಶುಕ್ರವಾರ ಮಧ್ಯಾಹ್ನ 12:30 ಗಂಟೆಗೆ ಕಲಬುರಗಿ ನಗರದ ಡಾ. ಎಸ್.ಎಂ ಪಂಡಿತ ರಂಗಮಂದಿರದಲ್ಲಿ ಸಂತ ಕವಿ ಸರ್ವಜ್ಞ ಜಯಂತಿ ಕಾರ್ಯಕ್ರಮ ಜರುಗಲಿದ್ದು, ಈ ಕಾರ್ಯಕ್ರಮದಲ್ಲಿ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಸೂಚಿಸಿದರು.

ಅಂದು ಬೆಳಿಗ್ಗೆ 9 ಗಂಟೆಗೆ ಕಡ್ಡಾಯವಾಗಿ ಎಲ್ಲಾ ಜಿಲ್ಲಾ ಹಾಗೂ ತಾಲೂಕು ಮಟ್ಟದ ಸರ್ಕಾರಿ ಕಚೇರಿಗಳಲ್ಲಿ, ಶಾಲಾ-ಕಾಲೇಜುಗಳಲ್ಲಿ ಕಡ್ಡಾಯವಾಗಿ ಜಯಂತಿ ಆಚರಿಸಬೇಕು. ಸಭೆಯಲ್ಲಿ ನುರಿತ ಉಪನ್ಯಾಸಕರನ್ನು ಸಹ ಆಹ್ವನಿಸ’ಲು ತೀವ’ರ್ಾನಿಸ’ಲಾಯಿತ’ು. ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡುವುದರ ಜೊತೆಗೆ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಜಯಂತಿ ಸಮಿತಿ ಅಧ್ಯಕ್ಷರಾಗಿ ಶಿವಶರಣಪ್ಪ ಎಲ್ ಕುಂಬಾರ, ಉಪನ್ಯಾಸಕರಾಗಿ ಹಾಗೂ ಭಕ್ತ ಕುಂಬಾರ ಕಾರ್ಯಕ್ರಮದ ನಿರೂಪಕರನ್ನಾಗಿ ಆಯ್ಕೆ ಮಾಡಲಾಯಿತು. ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಚೇರಿ ಸಿಬ್ಬಂದಿ ಗೌರಮ್ಮ ವಿ ಧೋಂತಾ ಅವರು ಪ್ರೋಟೋಕಾಲ್ ಪ್ರಕಾರ ಕಾರ್ಯಕ್ರಮ ಪತ್ರಿಕಾ ಆಮಂತ್ರಣ ಮುದ್ರಿಸಲಾಗುವುದು. ನಾಡಗೀತೆ, ಸಂಗೀತ ಕಾರ್ಯಕ್ರಮಗಳನ್ನು ಏರ್ಪಡಿಸಲಾಗುವುದು ಎಂದರು.

ವೇದಿಕೆ ಮೇಲೆ ಸಮಾಜದ ಮುಖಂಡರಾದ ಸದಾನಂದ ಕುಂಬಾರ, ವಿಠಲ ಕುಂಬಾರ, ವಿಜಯಕುಮಾರ ಕುಂಬಾರ, ಬಿ.ಡಿ. ಹವಾಲ್ದಾರ ಇತರರು ಉಪಸ್ಥಿತರಿದ್ದರು.





ಉಪ ಚುನಾವಣೆ : ಮತಗಟ್ಟೆ ಮಟ್ಟದ ಅಧಿಕಾರಿಗಳ ಸಭೆ

ಬಾಗಲಕೋಟೆ,ಫೆ.10-

ಬಾಗಲಕೋಟೆ ವಿಧಾನಸಭಾ ಮತಕ್ಷೇತ್ರದ ಉಪ ಚುನಾವಣೆಗೆ ಸಂಬಂಧಿಸಿದಂತೆ, ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ಸಂಗಪ್ಪ ಅವರ ಅಧ್ಯಕ್ಷತೆಯಲ್ಲಿ ಸೋಮವಾರ ನ’ವ’ನ’ಗ’ರ’ದ’ ಡಾ.ಬಿ.ಆರ್.ಅಂಬೇಡ್ಕರ’ ಭವನದಲ್ಲಿ ಮತಗಟ್ಟೆ ಮಟ್ಟದ ಅಧಿಕಾರಿಗಳ ಸಭೆ ಜರುಗಿತು.

ಮತಗಟ್ಟೆ ಮಟ್ಟದ ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದ ಜಿಲ್ಲಾ ಚ’ುನಾವ’ಣಾಧಿಕಾರಿಗ’ಳ’ು ಮತದಾರರ ಪಟ್ಟಿಯಲ್ಲಿ ಯಾವುದೇ ಲೋಪದೋಷಗಳು ಇಲ್ಲದಂತೆ ಮತದಾರ ಪಟ್ಟಿಯನ್ನು ಪರಿಶೀಲಿಸಲು ತಿಳಿಸಿದರು. ಮತಗಟ್ಟೆ ಅಧಿಕಾರಿಗಳು ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ, ಅಚ್ಚುಕಟ್ಟಾಗಿ ಕಾರ್ಯವನ್ನು ನಿರ್ವಹಿಸಬೇಕು. ಮತದಾರರ ಮಟ್ಟಿಯಲ್ಲಿ ಮರಣ ಹೊಂದಿದವರ ವಿವರಗಳನ್ನು ಪರಿಶೀಲಿಸುವ ಕಾರ್ಯವಾಗಬೇಕು ಎಂದರು.

ವ’ುತ’ದಾರ’ರ’ ಪಟ್ಟಿಯಲ್ಲಿ 85ಕ್ಕಿಂತ ಹೆಚ್ಚಿನ ಹಾಗೂ 100 ವಯಸ್ಸಿನ ಮತದಾರರನ್ನು ಪರಿಶೀಲಿಸುವದರ ಜೊತೆಗೆ ಮತದಾರರ ಪಟ್ಟಿಯಲ್ಲಿ ಮತದಾರರ ವಿವರಗಳನ್ನು ಮ್ಯಾಪಿಂಗ್ ಮಾಡುವ ಕುರಿತು ಕ್ರಮವಹಿಸಲು ತಿಳಿಸಿದರು. ಮತಗಟ್ಟೆ ಮಟ್ಟದ ಅಧಿಕಾರಿಗಳು ಚುನಾವಣಾ ಪ್ರಕ್ರಿಯೆಯ ಒಂದು ಅಂಗವಾಗಿರುವದರಿಂದ ಸದರಿ ಅಧಿಕಾರಿಗಳು ಚುನಾವಣೆಯಲ್ಲಿ ಮಹತ್ವದ ಕಾರ್ಯವನ್ನು ನಿರ್ವಹಿಸುತ್ತಿದ್ದು, ಚುನಾವಣೆಯು ಸುಗಮವಾಗಿ ಸಾಗಲು ತಮ್ಮ ಪಾತ್ರ ಸಹ ಮಹತ್ವವಾಗಿದೆ. ಯಾವುದೇ ರೀತಿಯಲ್ಲಿ ಲೋಪವಾಗದಂತೆ ಕ್ರಮವಹಿಸಲು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎ.ಸಿ.ಮನ್ನಿಕೇರಿ, ತಹಶೀಲ್ದಾರ ವಾಸುದೇವ ಸ್ವಾಮಿ. ಕ್ಷೇತ್ರ ಶಿಕ್ಷಣಾಧಿಕಾರಿ ಜಾಸ್ಮೀನ್ ಕಿಲ್ಲೇದಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

24 ರಂದು ಶ್ರೀ ಕನಕದುರ್ಗಮ್ಮ ದೇವಸ್ಥಾನ ಸಿಡಿಬಂಡಿ ರಥೋತ್ಸವ ಅದ್ದೂರಿ ಆಚರಣೆಗೆ ಸಿದ್ಧತೆ ಕೈಗೊಳ್ಳಿ: ಶಾಸಕ ನಾರಾ ಭರತ್ ರೆಡ್ಡಿ

ಬಳ್ಳಾರಿ,ಫೆ.10-

ಇದೇ ಫೆ.24 ರಂದು ನಡೆಯಲಿರುವ ಶ್ರೀ ಕನಕದುರ್ಗಮ್ಮ ದೇವಸ್ಥಾನದ ಸಿಡಿಬಂಡಿ ರಥೋತ್ಸವವನ್ನು ಅಚ್ಚುಕಟ್ಟಾಗಿ-ಅದ್ದೂರಿಯಾಗಿ ಆಚರಿಸಲು ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಹೇಳಿದರು.

ಶ್ರೀ ಕನಕದುರ್ಗಮ್ಮ ದೇವಸ್ಥಾನದ ಸಿಡಿಬಂಡಿ ರಥೋತ್ಸವ ಅಂಗವಾಗಿ ದೇವಸ್ಥಾನದ ಯಾತ್ರಿ ನಿವಾಸದ ಸಭಾಂಗಣದಲ್ಲಿ ಸೋಮವಾರ ಆಯೋಜಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರದ ಅಧಿದೇವತೆಯ ಮಹೋತ್ಸವವನ್ನು ಸಂಪ್ರದಾಯದಂತೆ ಆಚರಣೆಗೆ ಕ್ರಮ ವಹಿಸಬೇಕು. ಅಚ್ಚುಕಟ್ಟಾಗಿ ಆಯೋಜನೆ ಮಾಡುವ ಮೂಲಕ ಯಾವುದೇ ರೀತಿಯ ಲೋಪವಾಗದಂತೆ ನೋಡಿಕೊಳ್ಳಬೇಕು. ಈ ಕುರಿತು ಸಂಬಂಧಿಸಿದ ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಇದಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದರು.

ರಥೋತ್ಸವ ಕಾರ್ಯಕ್ರಮದಲ್ಲಿ ಲಕ್ಷಾಂತರ ಜನರು ಸೇರಲಿದ್ದು, ಬರುವ ಸಾರ್ವಜನಿಕರು ಮತ್ತು ಭಕ್ತಾಧಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆ, ಸರತಿ ಸಾಲಿನ ವ್ಯವಸ್ಥೆ, ಪಾರ್ಕಿಂಗ್ ವ್ಯವಸ್ಥೆ ನೋಡಿಕೊಳ್ಳಬೇಕು. ನಗರದದಲ್ಲಿ ದೀಪಾಲಂಕಾರದ ವ್ಯವಸ್ಥೆ ಮಾಡಬೇಕು. ಸೂಕ್ತ ಪೊಲೀಸ್ ಬಂದೋಬಸ್ತ್ ನಿಯೋಜಿಸಬೇಕು ಎಂದು ತಿಳಿಸಿದರು.

ಮುಖ್ಯವಾಗಿ ಮಹೋತ್ಸವದಲ್ಲಿ ದೇವಸ್ಥಾನದ ಸುತ್ತಲೂ ಸುತ್ತುವ ಸಿಡಿಬಂಡಿ ರಥದಲ್ಲಿ ಸಾಕಷ್ಟು ಜನ ಹತ್ತುವುದು ಕಂಡುಬರುತ್ತಿದ್ದು, ಸುರಕ್ಷತೆಯ ದೃಷ್ಟಿಯಿಂದ ಕೆಲವರಿಗೆ ಮಾತ್ರ ಅನುಮತಿ ನೀಡಬೇಕು ಮತ್ತು ಅವರಿಗೆ ಗುರುತಿನ ಚೀಟಿ ನೀಡಬೇಕು ಎಂದರಲ್ಲದೇ, ಅಂದು ಸಂಜೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಭಕ್ತಿ ಗಾಯನ, ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಬೇಕು ಎಂದು ಸೂಚಿಸಿದರು.

ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ವಹಿಸಿದ ಜವಾಬ್ದಾರಿಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸುವ ಮೂಲಕ ನಗರದ ಆರಾಧ್ಯದೇವಿ ಕನಕದುರ್ಗಮ್ಮ ದೇವಸ್ಥಾನದ ಸಿಡಿಬಂಡಿ ರಥೋತ್ಸವವನ್ನು ಯಶಸ್ವಿಗೊಳಿಸಬೇಕು ಎಂದರು.

ಮಹಾನಗರ ಪಾಲಿಕೆ ಮೇಯರ್ ಪಿ.ಗಾದೆಪ್ಪ ಅವರು ಮಾತನಾಡಿ, ದೇವಸ್ಥಾನದ ನೈರ್ಮಲೀಕರಣಕ್ಕೆ ದೇವಸ್ಥಾನದ ಸುತ್ತಲು ಜಾತ್ರಾ ಪ್ರದೇಶವನ್ನು ನಿರಂತರ ಸ್ವಚ್ಛವಾಗಿಟ್ಟುಕೊಳ್ಳಬೇಕು.

ಸಾರ್ವಜನಿಕರ ಆರೋಗ್ಯದ ವಿಚಾರಕ್ಕೆ ಸಂಬಂಧಿಸಿದಂತೆ ವೈದ್ಯಾಧಿಕಾರಿಗಳ ತಂಡ ಹಾಗೂ ಸೂಕ್ತ ಆಂಬ್ಯುಲೆನ್ಸ್ ವ್ಯವಸ್ಥೆ ಮಾಡಬೇಕು. ಅದರ ಜೊತೆಗೆ ಅಗತ್ಯ ಅಗ್ನಿಶಾಮಕದಳ ಸೇವೆ ಸಿದ್ಧವಾಗಿಟ್ಟುಕೊಳ್ಳಬೇಕು ಎಂದು ತಿಳಿಸಿದರು.

ಮಹೋತ್ಸವದಲ್ಲಿ ಕಟ್ಟೆಚ್ಚರ ವಹಿಸಲು ಸಿಸಿಟಿವಿ ಕ್ಯಾಮೆರಾ ಅಳವಡಿಸಲಾಗುವುದು. ಟ್ರಾಫಿಕ್ ನಿರ್ವಹಣೆಗಾಗಿ ದೇವಸ್ಥಾನದ ಸುತ್ತ-ಮುತ್ತಲಿನ ಪ್ರಮುಖ ರಸ್ತೆಗಳ ಸೂಕ್ತ ಸ್ಥಳದಲ್ಲಿ ಅವಕಾಶ ಮಾಡಲಾಗುತ್ತದೆ ಎಂದು ಬಳ್ಳಾರಿ ನಗರ ಡಿಎಸ್‌ಪಿ ನಂದಾರೆಡ್ಡಿ ಅವರು ಸಭೆಗೆ ತಿಳಿಸಿದರು.

ಸಾರ್ವಜನಿಕರು ಮತ್ತು ಭಕ್ತಾಧಿಗಳಿಗೆ ಸಾಲಿನಲ್ಲಿ ಬಂದು ದೇವಿಯ ದರ್ಶನ ಪಡೆಯಲು ಬ್ಯಾರಿಕೇಡ್ ವ್ಯವಸ್ಥೆ, ಸಿಡಿಬಂಡಿ ರಥೋತ್ಸವ ಸುತ್ತಲೂ ಬ್ಯಾರಿಕೇಡ್ ಅಳವಡಿಸಿ ಸೂಕ್ತ ರಕ್ಷಣೆ ಕಲ್ಪಿಸಬೇಕು ಎಂದು ಜಿಲ್ಲಾ ಗಾಣಿಗ ಸಮುದಾಯದ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ಅವರು ಸಭೆಯಲ್ಲಿ ಪ್ರಸ್ತಾಪಿಸಿದರು.

ಸಭೆಯಲ್ಲಿ ಉಪವಿಭಾಗಾಧಿಕಾರಿ ರಾಜೇಶ್ ಹೆಚ್.ಡಿ., ಮಹಾನಗರ ಪಾಲಿಕೆ ಆಯುಕ್ತ ಪಿ.ಮಂಜುನಾಥ, ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿ ಇಲಾಖೆಯ ಸಹಾಯಕ ಆಯುಕ್ತೆ ಸವಿತಾ.ಹೆಚ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಮಹಾನಗರ ಪಾಲಿಕೆ ಸದಸ್ಯರು, ಗಾಣಿಗ ಸಮುದಾಯದವರು ಹಾಗೂ ಸಾರ್ವಜನಿಕರು, ಮತ್ತಿತರರು ಉಪಸ್ಥಿತರಿದ್ದರು.



ಅಮರೇಶ್ವರ ಜಾತ್ರಾ ಸಿದ್ಧತೆ ಪರಿಶೀಲಿಸಿದ ಶಾಸಕ ಪ್ರಭು ಚವ್ಹಾಣ

ಔರಾದ್,ಫೆ.10-

ಅಮರೇಶ್ವರ ಜಾತ್ರಾ ಮಹೋತ್ಸವದ ನಿಮಿತ್ತ ಮಾಜಿ ಸಚಿವರು ಹಾಗೂ ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಸೋಮವಾರ ಪಟ್ಟಣದಲ್ಲಿ ಗಲ್ಲಿ-ಗಲ್ಲಿಗಳಲ್ಲಿ ಸಂಚರಿಸಿ ಸ್ವಚ್ಛತೆ, ಬೀದಿ ದೀಪ, ಹೈಮಾಸ್ಟ್ ದೀಪ ಸೇರಿದಂತೆ ಮತ್ತಿತರೆ ತಯಾರಿಗಳನ್ನು ಪರಿಶೀಲಿಸಿದರು.

ಅಮರೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ನೆರವೇರಿಸಿದ ನಂತರ ಶಾಸಕರು ದೇವಸ್ಥಾನದ ಆವರಣದಲ್ಲಿ ಸುತ್ತಾಡಿ ಅಡುಗೆ ಕೋಣೆಯನ್ನು ವೀಕ್ಷಿಸಿದರು. ಗೋಡೆಯ ಕೆಲವೆಡೆ ಮಳೆಗಾಲದಲ್ಲಿ ಸೋರಿಕೆಯಾಗುತ್ತಿರುವ ಬಗ್ಗೆ ಸ್ಥಳೀಯರು ಗಮನಕ್ಕೆ ತಂದಾಗ ಸರಿಪಡಿಸಲು ವ್ಯವಸ್ಥೆ ಮಾಡುತ್ತೇನೆ ಎಂದರು.

ನಂತರ ಜಾತ್ರಾ ಮಹೋತ್ಸವದಲ್ಲಿ ಪಲ್ಲಕ್ಕಿ ಮೆರವಣಿಗೆ ಸಾಗುವ ಅಮರೇಶ್ವರ ಮಂದಿರದಿಂದ ಅಗಸಿ ಮಾರ್ಗವಾಗಿ ರಾಗಾ ಗಲ್ಲಿ, ಶೆಟಕಾರ ಗಲ್ಲಿ, ದೇಶಮುಖ ಗಲ್ಲಿ ಸೇರಿದಂತೆ ವಿವಿಧೆಡೆ ಸಂಚರಿಸಿ ರಸ್ತೆ, ಚರಂಡಿ ಸ್ವಚ್ಛತೆ, ಬೀದಿ ದೀಪ, ಹೈಮಾಸ್ಟ್ ದೀಪಗಳು ಒಳಗೊಂಡು ವಿವಿಧ ಮೂಲಸೌಕರ್ಯಗಳನ್ನು ಪರಿಶೀಲಿಸಿದರು.

ಮಂದಿರದ ಸುತ್ತಲಿನ ಅಂಗಡಿಗಳಿಗೆ ಭೇಟಿ ನೀಡಿ, ಕಸದ ಬುಟ್ಟಿಗಳನ್ನು ಇಟ್ಟುಕೊಂಡಿರುವ ಅಂಗಡಿಗಳ ಮಾಲೀಕರಿಗೆ ಪ್ರಶಂಸಿಸಿದರು. ಎಲ್ಲರೂ ಇದೇ ರೀತಿ ಸ್ವಚ್ಛತೆಗೆ ಮಹತ್ವ ಕೊಡಬೇಕು. ತಮ್ಮ ತಮ್ಮ ಅಂಗಡಿಗಳ ತ್ಯಾಜ್ಯವನ್ನು ರಸ್ತೆಯ ಮೇಲೆ ಬೀಸಾಡದೇ ಕಸದ ಬುಟ್ಟಿಯಲ್ಲಿ ಹಾಕಿ ಪುರಸಭೆಯ ಸ್ವಚ್ಛತಾ ಕಾರ್ಯಕ್ಕೆ ಸಹಕರಿಸಬೇಕು.

ಜಾತ್ರೆಯ ಸಂದರ್ಭದಲ್ಲಿ ಇಡೀ ಪಟ್ಟಣ ಸ್ವಚ್ಛವಾಗಿ ಕಾಣಬೇಕು. ತಮ್ಮ ತಮ್ಮ ಮನೆಗಳ ಮುಂದೆ ಕಸ-ಕಡ್ಡಿ ಹಾಕದಂತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು. ಕಸದ ವಾಹನಗಳು ಪ್ರತಿದಿನ ಮನೆ-ಮನೆಗೆ ಭೇಟಿ ನೀಡಿ ಕಸ ವಿಲೇವಾರಿ ಮಾಡಬೇಕು ಎಂದು ಶಾಸಕರು ಪುರಸಭೆ ಮುಖ್ಯಾಧಿಕಾರಿಗೆ ಸೂಚಿಸಿದರು.

ನಂತರ ಮಾತನಾಡಿ, ಉದ್ಭವಲಿಂಗ ಅಮರೇಶ್ವರ ದೇವಸ್ಥಾನದ ಪುರಾತನ ಮತ್ತು ಐತಿಹಾಸಿಕ ಮಹತ್ವ ಹೊಂದಿರುವ ಅಪರೂಪದ ದೇವಸ್ಥಾನ. ವರ್ಷಕ್ಕೆ ಒಂದು ಬಾರಿ ಅತ್ಯಂತ ಅದ್ದೂರಿಯಾಗಿ ಜಾತ್ರೆ ನಡೆಯುತ್ತದೆ. ಕರ್ನಾಟಕವಲ್ಲದೇ ಬೇರೆ ಬೇರೆ ರಾಜ್ಯಗಳಿಂದಲೂ ಲಕ್ಷಾಂತರ ಜನ ಬಂದು ಅಮರೇಶ್ವರರ ದರ್ಶನ ಪಡೆದು ಪುನೀತರಾಗುತ್ತಾರೆ.

ಇಂತಹ ಜಾತ್ರೆ ಅಚ್ಚುಕಟ್ಟಾಗಿ ನಡೆಯಬೇಕು. ಜಾತ್ರೆಗೆ ಬರುವ ಭಕ್ತಾದಿಗಳಿಗೆ ಯಾವುದೇ ರೀತಿಯ ಅನಾನುಕೂಲ ಆಗದಂತೆ ನೋಡಿಕೊಳ್ಳಬೇಕು. ಸಾರ್ವಜನಿಕರು ಕೂಡ ಸ್ವಚ್ಛತಾ ಕಾರ್ಯಕ್ಕೆ ಸಹಕರಿಸಬೇಕು ಎಂದು ಮನವಿ ಮಾಡಿದರು. ಇದಕ್ಕೂ ಮುನ್ನ ಅಗ್ನಿಬಸವಣ್ಣ ದೇವಸ್ಥಾನದ ಬಳಿ ನಡೆಯುತ್ತಿರುವ ಫುಟ್‌ಪಾತ್ ಮತ್ತು ಚರಂಡಿ ಕಾಮಗಾರಿಯನ್ನು ವೀಕ್ಷಿಸಿದರು.

ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ: ಔರಾದ(ಬಿ) ಪಟ್ಟಣದ ವ್ಯಾಪ್ತಿಯಲ್ಲಿ ಬರುವ ಇಂದಿರಾನಗರ ತಾಂಡಾದಲ್ಲಿ 60 ಲಕ್ಷ ಅನುದಾನದಲ್ಲಿ ಕೈಗೊಂಡಿರುವ ಸಿಸಿ ರಸ್ತೆ ಮತ್ತು ಚರಂಡಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು. ಇದೇ ವೇಳೆ ಸ್ಥಳೀಯರೊಂದಿಗೆ ಸಂವಾದ ನಡೆಸಿ ಗ್ರಾಮದ ಸಮಸ್ಯೆಗಳು ಮತ್ತು ಆಗಬೇಕಾದ ಕೆಲಸಗಳ ಬಗ್ಗೆ ಚರ್ಚಿಸಿದರು.

ಹಾಗೆಯೇ ಪಟ್ಟಣದ ಆದರ್ಶ ವಿದ್ಯಾಲಯ, ಪಿಯು ಕಾಲೇಜು, ಪ್ರಾಥಮಿಕ ಮತ್ತು ಪ್ರೌಢ ಶಾಲೆಯ ವಿದ್ಯಾರ್ಥಿಗಳು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗೆ ಅನುಕೂಲವಾಗಲು 50 ಲಕ್ಷ ಮೊತ್ತದಲ್ಲಿ ಕೈಗೊಂಡಿರುವ ಸಿಸಿ ರಸ್ತೆ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿದರು. ನಂತರ ಮಾತನಾಡಿ, ಪಟ್ಟಣದಲ್ಲಿ ನಡೆಯುತ್ತಿರುವ ಎಲ್ಲ ಕಾಮಗಾರಿಗಳು ಗುಣಮಟ್ಟದಿಂದ ಮತ್ತು ನಿಗದಿತ ಕಾಲಾವಧಿಯಲ್ಲಿ ಮಾಡಿಕೊಡಬೇಕು. ಗುಣಮಟ್ಟದ ಕುರಿತಂತೆ ಯಾವುದೇ ರೀತಿಯ ದೂರುಗಳು ಬಂದಲ್ಲಿ ನಾನು ಸುಮ್ಮನಿರುವುದಿಲ್ಲವೆಂದು ಶಾಸಕರು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಪುರಸಭೆ ಮುಖ್ಯಾಧಿಕಾರಿ ಸ್ವಾಮಿದಾಸ, ಮುಖಂಡರಾದ ಧೋಂಡಿಬಾ ನರೋಟೆ, ಶಿವಾಜಿರಾವ ಪಾಟೀಲ ಮುಂಗನಾಳ, ಶಿವರಾಜ ಅಲ್ಮಾಜೆ, ಶಿವಾಜಿ ಬೋಗಾರ, ಕೇರಬಾ ಪವಾರ, ಬಸವರಾಜ ಹಳ್ಳೆ, ಸಂದೀಪ ಪಾಟೀಲ, ಪ್ರದೀಪ ಬುಟ್ಟೆ, ಗಜಾನಂದ ವಟಗೆ, ಶಿವಾಜಿ ಬಿರಾದಾರ, ಪ್ರಕಾಶ ಜೀರ್ಗೆ, ಬಾಬು ರಾಠೋಡ, ಸೋನು ರಾಠೋಡ, ಗುರುನಾಥ ಚವ್ಹಾಣ, ಸುಜಿತ ರಾಠೋಡ, ಪ್ರದೀಪ ಪವಾರ, ಪ್ರಕಾಶ ಅಲ್ಮಾಜೆ, ರಮೇಶ ಗೌಡಾ ಸೇರಿದಂತೆ ಇತರರು ಉಪಸ್ಥಿತರಿದ್ದರು.





ನೋಂದಾಯಿತ ಶಿಬಿರಾರ್ಥಿಗಳಿಗೆ ಆರು ದಿನಗಳ ಕಾಲ ಕೃಷಿ ಆಧಾರಿತ ರಫ್ತು ನಿರ್ವಹಣೆ ತರಬೇತಿಗೆ ಚಾಲನೆ

ಕಲಬುರಗಿ,ಫೆ.10-

ಕರ್ನಾಟಕ ಸರ್ಕಾರದ ಕರ್ನಾಟಕ ರೈತ ಸಮೃದ್ಧಿ ಯೋಜನೆಯಡಿ ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ, ಕಲಬುರಗಿ, ಕೃಷಿ ಇಲಾಖೆ ಹಾಗೂ ರಫ್ತು ಸೌಲಭ್ಯ ಕೇಂದ್ರ, ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ ಕಲಬುರಗಿ ಗ್ರ್ಯಾಂಡ್ ಹೋಟೆಲ್‌ದಲ್ಲಿ ಸುಮಾರು 35 ನೋಂದಾಯಿತ ಶಿಬಿರಾರ್ಥಿಗಳಿಗೆ ಆಯೋಜಿಸಲಾಗಿದ್ದ 6 ದಿನಗಳ ಕೃಷಿ ಆಧಾರಿತ ರಫ್ತು ನಿರ್ವಹಣೆ ತರಬೇತಿ ಕಾರ್ಯಕ್ರಮ (ಇಒಖಿಕ) ವನ್ನು ಈ ಕೃಷಿ ಆಧಾರಿತ ರಫ್ತು ನಿರ್ವಹಣೆ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಬೆಂಗಳೂರಿನ ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರದ ನಿರ್ದೇಶಕರು (ರಫ್ತು) ಹಾಗೂ ವ್ಯವಸ್ಥಾಪಕ ನಿರ್ದೇಶಕರಾದ ಬಿ.ಕೆ.ಶಿವಕುಮಾರ ಅವರು ಸೋಮವಾರ ಉದ್ಘಾಟಿಸಿದರು.

ನಂತರ ಅವರು ಮಾತನಾಡಿ, ರಾಜ್ಯ ಸರ್ಕಾರದಿಂದ ಪ್ರಪ್ರಥಮ ಬಾರಿಗೆ ಕಲಬುರಗಿಯಲ್ಲಿ ಇಂತಹ ರಫ್ತು ತರಬೇತಿಯನ್ನು ಆಯೋಜಿಸಲಾಗಿದ್ದು, ಈ ಭಾಗದಿಂದ ಕೃಷಿ ಆಧಾರಿತ ಉತ್ಪನ್ನಗಳು, ಉತ್ಪಾದನೆಗಳು ಮತ್ತು ಸಂಸ್ಕರಿಸಿದ ಆಹಾರ ಪದಾರ್ಥಗಳನ್ನು ರಫ್ತು ಮಾಡಲು ವಿಪುಲ ಅವಕಾಶಗಳಿವೆ ಎಂದರು.

ಕಾರ್ಯಕ್ರಮದಲ್ಲಿ ಕಲಬುರಗಿ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಅಬ್ದುಲ್ ಅಜೀಮ್ ಅವರು ಮಾತನಾಡಿ, ಮುಂದಿನ ದಿನಗಳಲ್ಲಿ ಕಲಬುರಗಿಯಲ್ಲಿ ಇಂಥಹ ರಫ್ತು ತರಬೇತಿಗಳನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಇದರ ಲಾಭ ಪಡೆದುಕೊಳ್ಳಲು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಜಂಟಿ ಕೃಷಿ ನಿರ್ದೇಶಕ ಸಮದ ಪಟೇಲ್ ಹಾಗೂ ಜಂಟಿ ತೋಟಗಾರಿಕಾ ನಿರ್ದೇಶಕ ಸಂತೋಷ ಇನಾಂದಾರ ಅವರು ಮಾತನಾಡಿದರು.

ವಿಟಿಪಿಸಿ ರಫ್ತು ಸಂಯೋಜಕ ಅರವಿಂದ ಭಟ್ ಅವರು ರಫ್ತು ತರಬೇತಿ ಬಗ್ಗೆ ವಿವರಿಸಿದರು. ಕಲಬುರಗಿ ವಿಟಿಪಿಸಿ ಶಾಖೆ ರಫ್ತು ಸೌಲಭ್ಯ ಕೇಂದ್ರದ ಸಹಾಯಕ ನಿರ್ದೇಶಕ ಜಾಫರ್ ಖಾಸಿಮ್ ಅನ್ಸಾರಿ ಅವರು ಕಾರ್ಯಕ್ರಮ ನಿರೂಪಿಸಿದರು. ಕಲಬುರಗಿ ಜಿಲ್ಲಾ ಕೈಗಾರಿಕಾ ಕೇಂದ್ರದ ಸಹಾಯಕ ನಿರ್ದೇಶಕ ಕು.ರುಪಾಲಿ ವಂದಿಸಿದರು.

ಒಂದನೇಯ ಪುಟದಿಂದ

ಜಿಲ್ಲಾಡಳಿತ ದಿಂದ ಕಾಯಕ ಶರಣರ ಜಯಂತಿ ಆಚರಣೆ

ಸಮಸಮಾಜ ಕಟ್ಟುವಲ್ಲಿ ಕಾಯಕ ಶರಣರ ಕೊಡುಗೆ ಅಪಾರ: ತಹಶೀಲ್ದಾರ್ ಸುರೇಶ ವರ್ಮಾ

ಯಾರನ್ನೂ ಕೀಳಾಗಿ ಕಾಣಬಾರದು ಎಂಬುವುದು ಬಸವೇಶ್ವರರ ಸಮಾನತೆಯ ತತ್ವವಾಗಿದ್ದು, ಅವರ ಹಾದಿಯಲ್ಲಿ ನಡೆದ ಕಾಯಕ ಶರಣರಾದ ಮಾದಾರ ಚನ್ನಯ್ಯ, ಮಾದಾರ ಧೂಳಯ್ಯ, ಡೋಹರ ಕಕ್ಕಯ್ಯ, ಸಮಗಾರ ಹರಳಯ್ಯ ಮತ್ತು ಉರಿಲಿಂಗ ಪೆದ್ದಿಯವರು ಶರಣ ಪಡೆಯ ಮಹನೀಯರಾಗಿದ್ದಾರೆ ಎಂದು ಹೇಳಿದರು.

ಕಾಯಕ ಶರಣರ ಭಾವಚಿತ್ರ ಮೆರವಣಿಗೆಗೆ ಚಾಲನೆ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಕಾಯಕ ಶರಣರ ಜಯಂತಿ ಅಂಗವಾಗಿ ಮಾದಾರ ಚನ್ನಯ್ಯ, ಮಾದಾರ ಧೂಳಯ್ಯ, ಡೋಹರ ಕಕ್ಕಯ್ಯ, ಸಮಗಾರ ಹರಳಯ್ಯ ಮತ್ತು ಉರಿಲಿಂಗ ಪೆದ್ದಿಯವರ ಭಾವಚಿತ್ರಕ್ಕೆ ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಅವರು ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡುವ ಮೂಲಕ ಮೆರವಣಿಗೆಗೆ ಚಾಲನೆ ನೀಡಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಪ್ರಾರಂಭವಾದ ಮೆರವಣಿಗೆಯು ನಗರದ ಸಾರ್ವಜನಿಕ ಉದ್ಯಾನವನದ ಮಾರ್ಗವಾಗಿ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮದಿರದವರೆಗೆ ನಡೆಯಿತು.

ಮೆರವಣಿಗೆಯಲ್ಲಿ ವಿವಿಧ ಕಲಾತಂಡಗಳು ಭಾಗವಹಿಸಿದ್ದವು.

ಇದೇ ಸಂದರ್ಭದಲ್ಲಿ ಸಮಾಜ ಮುಖಂಡರಾದ ರಾಜು, ಭೀಮಣ್ಣ, ಯಮೂನಪ್ಪ, ಹನುಮಂತು, ವೇಣುಗೋಪಾಲ, ಹನುಮಂತಪ್ಪ ಮನ್ನಾಪುರಿ, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಇದ್ದರು.

ಸಾರಿಗೆ ಬಸ್-ಟಂಟಂ ಮುಖಾಮುಖಿ ಢಿಕ್ಕಿ : ಗರ್ಭಿಣಿ ಸೇರಿ ಇಬ್ಬರು ಮೃತ್ಯು, 14 ಜನರಿಗೆ ಗಾಯ

ಘಟನೆಯ ಸುದ್ದಿ ತಿಳಿಯುತ್ತಿದ್ದಂತೆ ಶಾಸಕಿ ಕರೆಮ್ಮ ಜಿ. ನಾಯಕ ಸ್ಥಳೀಯ ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳುಗಳ ಆರೋಗ್ಯ ವಿಚಾರಿಸಿ, ಮೃತರ ಕುಟುಂಬಗಳಿಗೆ ಸಾಂತ್ವನ ಹೇಳಿದರು. ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವವರ ಬಗ್ಗೆ ದೂರವಾಣಿ ಮೂಲಕ ವೈದ್ಯರನ್ನು ಸಂಪರ್ಕಿಸಿ ಮಾಹಿತಿ ಪಡೆದರು. ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಕೂಡ ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳುಗಳ ಸ್ಥಿತಿ ಕುರಿತು ಮಾಹಿತಿ ಸಂಗ್ರಹಿಸಿದರು.

ಶ್ರೀಶೈಲಂ ಜಾತ್ರೆಯ ಅಂಗವಾಗಿ ವಿಶೇಷ ಬಸ್ಸುಗಳ ಕಾರ್ಯಾಚರಣೆ

ಚೂರು: 7760992363, 2ನೇ ಘಟಕ ರಾಯಚೂರು: 7760992364, 3ನೇ ಘಟಕ ರಾಯಚೂರು: 7619351087, ಲಿಂಗಸೂಗುರು: 7760992365, ಸಿಂಧನೂರು: 7760992366, ಮಾನವಿ: 7760992367, ದೇವದುರ್ಗ: 7760992368, ಮಸ್ಕಿ: 7760992361 ಹಾಗೂ ವಿಭಾಗೀಯ ಸಂಚಾರ ಅಧಿಕಾರಿಗಳ ಸಂಖ್ಯೆ: 7760992352ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ರಾಯಚೂರು ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿಗಳಾದ ಚಂದ್ರಶೇಖರ ಎಂ.ಎಸ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಷ್ಟ್ರೀಯ ಜಂತುಹುಳು ನಿವಾರಣಾ ಕಾರ್ಯಕ್ರಮಕ್ಕೆ ಚಾಲನೆ

ಜಂತುಹುಳು ದೇಹಕ್ಕೆ ಪ್ರವೇಶವಾಗದಂತೆ ಎಚ್ಚರಿಕೆ ವಹಿಸಿ: ಈಶ್ವರ ಕುಮಾರ

ಮೂಡಿಸಲಾಗುತ್ತಿದ್ದು, ಮಾತ್ರೆಗಳನ್ನು ಪ್ರತಿ ಮಗುವು ಚಿಪಿಸಿ ನುಂಗಿಸಲು ಕ್ರಮವಹಿಸಿ ಮಕ್ಕಳಲ್ಲಿಯ ಜಂತುಹುಳು ನಿವಾರಣೆ ಮಾಡುವ ಮೂಲಕ ಜಿಲ್ಲೆಯ ಮಕ್ಕಳು ಆರೋಗ್ಯವಂತರಾಗಲು ಎಲ್ಲರೂ ಶ್ರಮಿಸಬೇಕು. ಅಲ್ಲದೆ ಸಮುದಾಯದಲ್ಲಿ ಜಂತಹುಳು ತಡೆಗೆ ಶೌಚಕ್ಕಾಗಿ ಶೌಚಾಲಯಗಳ ಬಳಕೆ, ಊಟದ ಮೊದಲು ಶೌಚದ ನಂತರ ಕೈಗಳನ್ನು ಸಾಬೂನು ಮತ್ತು ನೀರಿನಿಂದ ತೊಳೆಯುಲು, ನಡೆಯುವಾಗ ಪಾದರಕ್ಷೆ ಬಳಕೆ, ಶುದ್ದ ನೀರು ಸೇವನೆ, ಹಣ್ಣು ತರಕಾರಿ ಸ್ವಚ್ಛವಾಗಿ ತೊಳೆದು ಬಳಸುವುದು ಪೌಷ್ಟಿಕ ಆಹಾರ ಸೇವಿಸುವುದು ಜಂತುಹುಳು ತಡೆಗೆ ಸಹಕಾರಿಯಾಗಿವೆ ಎಂಬುದನ್ನು ವ್ಯಾಪಕ ಪ್ರಚಾರ ಕೈಗೊಳ್ಳಲು ಸೂಚಿಸಿದರು.

ಇದಕ್ಕೂ ಮುಂಚೆ ಪ್ರಸ್ತಾವಿಕವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು ಅವರು ಮಾತನಾಡಿ, ಜಿಲ್ಲೆಯ ಎಲ್ಲ ವೈದ್ಯಾಧಿಕಾರಿಗಳ ನಿಗಾವಣೆಯಲ್ಲಿ ಆರೋಗ್ಯ ಸಿಬ್ಬಂದಿಯವರು ಮಾತ್ರೆ ಚಿಪಿಸಿ ನುಂಗಿಸುವ ಕಾರ್ಯ ನಿರ್ವಹಿಸುತ್ತಿದ್ದು, ಗೈರುಹಾಜರಿ ಅಥವಾ ಅನಾರೋಗ್ಯದ ಕಾರಣದಿಂದಾಗಿ ಇಂದು ಯಾವುದಾದರೂ ಮಗು ಮಾತ್ರೆಯನ್ನು ತೆಗೆದುಕೊಳ್ಳು ಸಾಧ್ಯವಾಗದಿದ್ದಲ್ಲಿ ಅಂತ ಮಕ್ಕಳಿಗೆ ಫೆಬ್ರವರಿ 16 ರಂದು ಮಾಪ್ ಅಫ್ ದಿನದಂದು ಮಾತ್ರೆಗಳನ್ನು ಚಿಪಿಸಲಾಗುವುದು ಎಂದರು.

ಇದೇ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಕೆ.ಡಿ ಬಡಿಗೇರ, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಂ.ಎನ್., ಜಿಲ್ಲಾ ಬಿಸಿ ಊಟದ ಅಧಿಕಾರಿ ಪ್ರಭು, ತಾಲೂಕಾರೋಗ್ಯಾಧಿಕಾರಿ ಡಾ.ಅಮೃತ್ ಹುಕ್ಕೇರಿ, ಪ್ರಭಾರಿ ಕ್ಷೇತ್ರ ಶಿಕ್ಷಣಾಧಿಕಾರಿ ಯುನಸ್ ಬಾಬು, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಅಮರೆಗೌಡ, ವೈದ್ಯಾಧಿಕಾರಿಗಳಾದ ಡಾ.ಅಶ್ವಾಕ್ ಹುಸೇನ್, ಡಾ.ಬುದ್ದಾನಂದ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ್ ದಾಸಪ್ಪನವರ, ಡಿವೈಡಿಹೆಚ್‌ಇಓ ಬಸಯ್ಯ, ಮುಖ್ಯೋಪಾದ್ಯಾಯರಾದ ರಾಜಶೇಖರ್ ಪಾಟೀಲ್, ಡಿಪಿಎಮ್ ನವೀನ್ ಕುಮಾರ, ಆರ್‌ಕೆಎಸ್‌ಕೆ ಸಂಯೋಜಕರಾದ ಜ್ಯೋತಿ ಆಲೂರು, ಕಚೇರಿ ಅಧಿಕ್ಷಕ ವೆಂಕಟೇಶ್, ಹಿರಿಯ ಹೆಚ್‌ಐಓ ಸುರೇಶ್, ಬಿಹೆಚ್‌ಇಓ ಸರೋಜಾ ಕೆ, ಎಫ್‌ಡಿಎ ರಾಘವೇಂದ್ರ, ಸಿಬ್ಬಂದಿಯವರಾದ ಜಮೀಲ, ಅರುಣ್‌ಕುಮಾರ್, ವನೀತಾ, ಬಿಬ್ಲಿ ಬಾಚಯ್ಯ, ಸಿದ್ದಮ್ಮ, ಚಿರಂಜೀವಿ ಸೇರಿದಂತೆ ಶಾಲಾ ಶಿಕ್ಷಕರು, ಆಶಾ ಕಾರ್ಯಕರ್ತೆಯರು, ಶಾಲಾ ಮಕ್ಕಳು ಉಪಸ್ಥಿತರಿದ್ದರು.

ನೂತನ ದೇವಸೂಗೂರು ಮಂಡಲ ಅಧ್ಯಕ್ಷರಾದ ಶರಣಪ್ಪ ನಾಮಾಲಿ ಅವರ ಪದಗ್ರಹಣ ಕಾರ್ಯಕ್ರಮ

ಇವತ್ತು ಅಬಕಾರಿ ಇಲಾಖೆಗೂ ಬಂದು ತಲುಪಿದೆ. ರಾಜ್ಯ ಸರಕಾರವು

ಒಂದು ಕಡೆ ತನ್ನ ಗ್ಯಾರಂಟಿಗಳಿಗೆ ಹಣ ಕ್ರೋಢೀಕರಿಸಲು ಸಾಧ್ಯವಾಗದೇ ಅಬಕಾರಿ ಇಲಾಖೆಯಲ್ಲಿ ಟಾರ್ಗೆಟ್ ಹೆಚ್ಚಿಸಿ ಕರ್ನಾಟಕವನ್ನ ಕುಡುಕರ ರಾಜ್ಯವಾಗಿ ಮಾಡುತ್ತಿದೆ. ಅಬಕಾರಿ ಇಲಾಖೆಯಲ್ಲಿ 6 ಸಾವಿರ ಕೋಟಿ ಭ್ರಷ್ಟಾಚಾರ ನಡೆದಿದೆ. ನಾನು ರಾಜ್ಯದ ಹಲವಾರು ಕಡೆ ಪ್ರವಾಸ ಕೈಗೊಂಡಿದ್ದೇನೆ. ಕಾಂಗ್ರೆಸ್ ಸರಕಾರ ಆಡಳಿತಕ್ಕೆ ಬೇಸತ್ತು ರಾಜ್ಯದ ಜನರು ಬದಲಾವಣೆ ಬಯಸಿದ್ದಾರೆ ಎಂದರು. ಭ್ರಷ್ಟಾಚಾರ ಮಾಡುತ್ತಿರುವ ಕಾಂಗ್ರೆಸ್ ನಾಯಕರನ್ನು ರಕ್ಷಣೆ ಮಾಡುತ್ತದೆ.ಇಂತಹ ಭ್ರಷ್ಟ ಸರಕಾರವನ್ನು ಹಿಂದೆ ನೋಡಿಲ್ಲ ಮುಂದೆ ನೋಡಿಲ್ಲ ಎಂದು ಕಾಂಗ್ರೆಸ್ ಸರಕಾರ ವಿರುದ್ಧ ಕಿಡಿಕಾಡಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮುಡಹಗರಣದಲ್ಲಿ ನಾನು ಜಗ್ಗುವುದಿಲ್ಲ ಬಗ್ಗುವುದಿಲ್ಲ ಪ್ರಚಾರದಲ್ಲಿ ಕೈಗೊಂಡಿದ್ದರು. ಆದರೆ ನಾವು ಸೈಟ್ಗಳನ್ನು ಹಿಂತಿರುಗಿಸುವ ಮೂಲಕ ಬಗ್ಗಿಸಿ ಬಿಟ್ಟವಿ ಎಂದರು.

ಬಿಸಳಿನ ತಾಪ ಏರಿಲ್ಲ ಆದರೆ ರಾಯಚೂರು ಗ್ರಾಮೀಣ ಪ್ರದೇಶದಲ್ಲಿ ಚುನಾವಣೆ ಬಿಸಿ ಏರಿದೆ ಎಂದರು.

ಇದು ನಿಮಗೆ ನೀಡಿರುವುದು ಅಧಿಕಾರವಲ್ಲ ಪಕ್ಷದ ಜವಾಬ್ದಾರಿ, ಪಕ್ಷ ಸಂಘಟನೆ ಮೂಲಕ ಪಕ್ಷವನ್ನು ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ಕಾರ್ಯಕರ್ತರು ಶ್ರಮಿಸಬೇಕು ಎಂದರು. ರಾಜ್ಯದ ವಿಧಾನಸಭಾ ಚುನಾವಣೆಯಲ್ಲಿ 150 ಸೀಟು ಗೆಲ್ಲುವ ಮೂಲಕ ತಿಪ್ಪರಾಜು ಹವಲ್ದಾರ್ ಅವರ ಕೈ ಬಲಪಡಿಸಬೇಕೆಂದರು. ಮಾಜಿ ಶಾಸಕರು ತಿಪ್ಪರಾಜು ಹವಾಲ್ದಾರ್ ಅವರು ಮಾತನಾಡಿದರು.

ಭಾರತೀಯ ಜನತಾ ಪಕ್ಷದ ಒಗ್ಗಟ್ಟು ಪ್ರದರ್ಶನ ಪ್ರಚಾರ ದೇವಸೂಗೂರು ನಿಂದ ಆರಂಭವಾಗಲಿ ಎಂದರು. ಬಿಜೆಪಿ ಗ್ರಾಮೀಣ ಮಂಡಲ ಪ್ರಧಾನ ಕಾರ್ಯದರ್ಶಿ ನವೀನ್ ಕುರ್ಡಿ ಅವರು ಪ್ರಾಸ್ತವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ರವೀಂದ್ರ, ಜಾಲ್ದಾರ್, ಜಂಬಣ್ಣ ನೀಲಗಲ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಅಂಚೆ ಜೀವ ವಿಮೆ ಉತ್ಪನ್ನಗಳ ಮಾರಾಟ ಪ್ರತಿನಿಧಿಗಳ ಆಯ್ಕೆಗೆ ನೇರ ಸಂದರ್ಶನ

ರಾಯಚೂರು ಫೆ.10

ಇಲ್ಲಿನ ಅಂಚೆ ಇಲಾಖೆಯಿಂದ ರಾಯಚೂರು ವಿಭಾಗದಲ್ಲಿ ಅಂಚೆ ಜೀವ ವಿಮೆ ಹಾಗೂ ಗ್ರಾಮೀಣ ಅಂಚೆ ಜೀವ ವಿಮೆ ಉತ್ಪನ್ನಗಳನ್ನು ಮಾರಾಟ ಮಾಡಲು ನೇರ ಪ್ರತಿನಿಧಿಗಳ ಆಯ್ಕೆಗಾಗಿ ನೇರ ಸಂದರ್ಶನಕ್ಕೆ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಫೆ.20ರ ಬೆಳಿಗ್ಗೆ 11ಗಂಟೆಗೆ ರಾಯಚೂರಿನ ಗಂಜ್ ವೃತ್ತದ ಬಳಿರುವ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ.

ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು 10ನೇ ತರಗತಿ ಪಾಸಾಗಿದ್ದು, ಕನಿಷ್ಠ 18 ಆಗಿರಬೇಕು. ನಿರುದ್ಯೋಗಿ, ಸ್ವಯಂ ಉದ್ಯೋಗ ನಿರತ ಯುವಕರು, ವಿಮಾ ಕಂಪನಿಗಳ ಮಾಜಿ ಏಜೆಂಟರು, ಸಲಹೆಗಾರರು, ಮಾಜಿ ಸೈನಿಕರು, ಅಂಗನವಾಡಿ ಕಾರ್ಯಕರ್ತೆಯರು, ಮಹಿಳಾ ಮಂಡಳದ ಕಾರ್ಯಕರ್ತೆಯರು, ನಿವೃತ್ತ ಪ್ರಧಾನ ಮತ್ತು ಗ್ರಾಮ ಪಂಚಾಯತ್ ಸದಸ್ಯರು ಹಾಗೂ ಅಂಚೆ ವಿಭಾಗದ ಮುಖ್ಯಸ್ಥರಿಗೆ ಸಮಂಜಸವೆದು ಕಂಡುಬದ ಯಾವುದೇ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಾಗುತ್ತದೆ.

ನುರಿತ, ಸಂವಹನಾ ಕಲೆ ಹಾಗೂ ವಿಮಾ ಮಾರಾಟ ಕ್ಷೇತ್ರದಲ್ಲಿ ಪೂರ್ವಾನುಭವ ಹೊಂದಿರುವವರಿಗೆ ಆದ್ಯತೆ ನೀಡಲಾಗುತ್ತಿದೆ. ಆಯ್ಕೆಯಾದ ಅಭ್ಯರ್ಥಿಗಳು 5 ಸಾವಿರ ರೂ.ಗಳ ರಾಷ್ಟ್ರೀಯ ಉಳಿತಾಯ ಪತ್ರ ಅಥವಾ ಕಿಸಾನ್ ವಿಕಾಸ ಪತ್ರದ ರೂಪದಲ್ಲಿ ಭದ್ರತಾ ಠೇವಣಿ ಇಡಬೇಕು. ಆಯ್ಕೆಯಾದ ಪ್ರತಿನಿಧಿಗಳಿಗೆ ವ್ಯವಹಾರಕ್ಕೆ ತಕ್ಕಂತೆ ಸೂಕ್ತ ಕಮಿಷನ್ ನೀಡಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಂಚೆ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ರಾಯಚೂರು ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಪಸ್ಮಾರ; ಮೂಢನಂಬಿಕೆ, ತಪ್ಪು ಕಲ್ಪನೆ ಕುರಿತು ಅರಿವು ಇರಲಿ- ಡಾ.ವಸಂತ

ಬಳ್ಳಾರಿ,ಫೆ.10-

ಅಪಸ್ಮಾರ ರೋಗದ ಬಗ್ಗೆ ಇರುವ ತಪ್ಪು ಕಲ್ಪನೆಗಳು ಮತ್ತು ಮೂಢನಂಬಿಕೆಗಳ ಬಗ್ಗೆ ಸಾರ್ವಜನಿಕರು ಅರಿವು ಹೊಂದಬೇಕು ಎಂದು ಬೆಂಗಳೂರಿನ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶಕ ಡಾ.ವಸಂತ ಅವರು ಹೇಳಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ನಿಮ್ಹಾನ್ಸ್ ಸಂಸ್ಥೆ, ಕರ್ನಾಟಕ ಮೆದುಳಿನ ಉಪಕ್ರಮ ಕಾರ್ಯಕ್ರಮ, ಮೆದುಳಿನ ಆರೋಗ್ಯ ಚಿಕಿತ್ಸಾ ಕೇಂದ್ರ ಹಾಗೂ ಜಿಲ್ಲಾ ಆಸ್ಪತ್ರೆ ಇವರ ಸಂಯುಕ್ತಾಶ್ರಯದಲ್ಲಿ ಅಂತರಾಷ್ಟ್ರೀಯ ಅಪಸ್ಮಾರ ದಿನಾಚರಣೆ ಜಿಲ್ಲಾ ಆಸ್ಪತ್ರೆಯಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಅಪಸ್ಮಾರ (ಮೂರ್ಛೆ ರೋಗ) ಖಾಯಿಲೆಯ ಕುರಿತು ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಅಪಸ್ಮಾರ(ಮೂರ್ಛೆರೋಗ) ಎಂಬುದು ಮೆದುಳಿನ ನರಕೋಶಗಳ ಅಸಹಜ ಚಟುವಟಿಕೆಯಿಂದ ಉಂಟಾಗುವ ದೀರ್ಘಕಾಲದ ನರವೈಜ್ಞಾನಿಕ ಕಾಯಿಲೆಯಾಗಿದೆ. ಇದರಿಂದ ದೇಹದ ಚಲನೆ, ನಡವಳಿಕೆ ಮತ್ತು ಪ್ರಜ್ಞೆಯಲ್ಲಿ ತಾತ್ಕಾಲಿಕ ಅಡಚಣೆಯಾಗುತ್ತದೆ. ಇದು ಜನ್ಮಜಾತ ದೋಷಗಳು, ತಲೆಗೆ ಪೆಟ್ಟು, ಸೋಂಕು, ಗೆಡ್ಡೆ ಅಥವಾ ಸ್ಟ್ರೋಕ್ ನಿಂದ ಬರಬಹುದು. ಆದರೆ ಶೇ.70 ರಷ್ಟು ಪ್ರಕರಣಗಳನ್ನು ಔಷಧಿಗಳಿಂದ ನಿಯಂತ್ರಿಸಬಹುದು ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಮಾತನಾಡಿ, ಅಪಸ್ಮಾರವು ಸಾಂಕ್ರಾಮಿಕ ರೋಗವಲ್ಲ ಮತ್ತು ಸರಿಯಾದ ವೈದ್ಯಕೀಯ ಚಿಕಿತ್ಸೆಯಿಂದ ರೋಗಿಗಳು ಸಾಮಾನ್ಯ ಜೀವನವನ್ನು ನಡೆಸಬಹುದು. ಹಾಗಾಗಿ ಸಾರ್ವಜನಿಕರು ಅಪಸ್ಮಾರ ರೋಗದ ಲಕ್ಷಣ ಹಾಗೂ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಅರಿವು ಹೊಂದಬೇಕು ಎಂದರು.

ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಬಸರೆಡ್ಡಿ ಅವರು ಮಾತನಾಡಿ, ಜಿಲ್ಲಾ ಆಸ್ಪತ್ರೆಯಲ್ಲಿ ಕೋಣೆ ಸಂ.05 ರಲ್ಲಿ ಮೆದುಳಿನ ಆರೋಗ್ಯ ಚಿಕಿತ್ಸಾ ಕೇಂದ್ರವಿದ್ದು, ಇಲ್ಲಿ ಬಹುವಿಧದ ತಜ್ಞ ವೈದ್ಯರನ್ನೊಳಗೊಂಡ ತಂಡ ಕಾರ್ಯನಿರ್ವಹಿಸುತಿದ್ದು, ಸಾರ್ವಜನಿಕರು ಈ ಸೌಲಭ್ಯವನ್ನು ಸದುಪಯೋ ಗಪಡೆದು ಕೊಳ್ಳಬೇಕು. ಇದು ಸಂಪೂರ್ಣವಾಗಿ ಉಚಿತವಾಗಿರುತ್ತದೆ ಎಂದು ತಿಳಿಸಿದರು.

ಜಿಲ್ಲಾ ಆಸ್ಪತ್ರೆಯ ಮೆದುಳಿನ ಆರೋಗ್ಯ ಚಿಕಿತ್ಸಾ ಕೇಂದ್ರದ ಮೆದುಳಿನ ಆರೋಗ್ಯ ಉಪಕ್ರಮದ ಜಿಲ್ಲಾ ಸಂಯೋಜಕ ಸಣ್ಣ ಕೇಶವ ಅವರು ಪ್ರತಿಜ್ಞಾ ವಿಧಿ ಬೋಧಿಸಿದರು.

ಈ ವೇಳೆ ಜಿಲ್ಲಾ ಅಸಾಂಕ್ರಾಮಿಕ ರೋಗಗಳ ನಿಯಂತ್ರಣಾಧಿಕಾರಿ ಡಾ.ಕೆ.ಜಿ.ವೀರೇಂದ್ರ ಕುಮಾರ್, ಸ್ಥಾನಿಕ ವೈದ್ಯಾಧಿಕಾರಿ ಡಾ.ವಿಶ್ವನಾಥ ಕೆ., ವಿಭಾಗದ ಮುಖ್ಯಸ್ಥರು ಹಾಗೂ ತಜ್ಞ ವೈದ್ಯ ಡಾ.ಶ್ರೀಧರ ಮದ್ದಿನೇನಿ, ಮೆದುಳಿನ ಆರೋಗ್ಯ ಚಿಕಿತ್ಸಾ ಕೇಂದ್ರದ ನೋಡೆಲ್ ಅಧಿಕಾರಿ ಡಾ.ರಾಕೇಶ್, ಸಾಮಾನ್ಯ ಕರ್ತವ್ಯ ನಿರತ ವೈದ್ಯಾಧಿಕಾರಿ ಡಾ.ಪ್ರಿಯಾಂಕ ಪ್ರಸಾದ್, ಶುಶ್ರೂಷಕ ಅಧೀಕ್ಷಕಿ ವಿಮಲಾಕ್ಷಿ ಸೇರಿದಂತೆ ಅಧಿಕಾರಿ-ಸಿಬ್ಬಂದಿ ವರ್ಗ ಮತ್ತು ಸಾರ್ವಜನಿಕರು ಭಾಗವಹಿಸಿದ್ದರು.



ಉಪ ಚುನಾವಣೆ : ಚುನಾವಣಾ ವೆಚ್ಚದ ಕರಡು ದರಪಟ್ಟಿ ಪ್ರಕಟ

ಬಾಗಲಕೋಟೆ,ಫೆ.10-

ಬಾಗಲಕೋಟೆ ವಿಧಾನ ಸಭಾ ಮತಕ್ಷೇತ್ರದ ಉಪ ಚುನಾವಣೆಗೆ ಸಂಬಂಧಿದಂತೆ ಚುನಾವಣೆಯಲ್ಲಿ ಸ್ಪರ್ಧಿಸುವ ಅಭ್ಯರ್ಥಿಗಳ ಖರ್ಚು ವೆಚ್ಚಗಳ ಕರಡು ದರಪಟ್ಟಿ ಪ್ರಕಟಿಸುವ ಕುರಿತು ಜಿಲ್ಲಾಧಿಕಾರಿಗಳು ಆಗಿರುವ ಜಿಲ್ಲಾ ಚುನಾವಣಾಧಿಕಾರಿ ಸಂಗಪ್ಪ ಅವರ ಅಧ್ಯಕ್ಷತೆಯಲ್ಲಿ ಸೋಮವಾರ ವಿವಿಧ ರಾಜಕೀಯ ಮುಖಂಡರುಗಳ ಸಭೆ ಜರುಗಿತು.

ಬರುವ ಉಪ ಚುನಾವಣೆ ಹಿನ್ನಲೆಯಲ್ಲಿ ಚುನಾವಣಾ ವೆಚ್ಚಗಳ ಕರಡು ದರಪಟ್ಟಿಯನ್ನು ಪ್ರಕಟಿಸಲಾಗಿದ್ದು, ದರಪಟ್ಟಿಯ ಬಗ್ಗೆ ಆಕ್ಷೇಪಣೆಗಳು ಇದ್ದಲ್ಲಿ ಒಂದು ವಾರದೊಳಗೆ ಸಲ್ಲಿಸಬಹುದಾಗಿದೆ. ಫೆಬ್ರವರಿ 14 ರಂದು ಬಾಗಲಕೋಟೆ ವಿಧಾನಸಭೆ ಮತಕ್ಷೇತ್ರಕ್ಕೆ ಸಂಬಂಧಿಸಿದ ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುತ್ತಿದ್ದು, ಅಂದು ಎಲ್ಲ ರಾಜಕೀಯ ಪಕ್ಷದ ಮುಖಂಡರು ಹಾಜರಾಗಿ ಮತದಾರರ ಪಟ್ಟಿಗಳನ್ನು ಪಡೆದುಕೊಳ್ಳುವಂತೆ ಕೋರಿದರು.

ಸಭೆಯಲ್ಲಿ ಉಪ ವಿಭಾಗಾಧಿಕಾರಿ ಸಂತೋಷ ಜಗಲಾಸರ, ತಹಶೀಲ್ದಾರ ವಾಸುದೇವ ಸ್ವಾಮಿ, ಚುನಾವಣಾ ವಿಭಾಗದ ಮಹೇಶ ಪಾಂಡವ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳಾದ ಶ್ರೀನಿವಾಸ ಬಳ್ಳಾರಿ, ನಾಗರಾಜ ಹದ್ಲಿ, ರಾಜು ಮನ್ನಿಕೇರಿ, ಶ್ರೀದರ ನೀಲನಾಯಕ, ಪ್ರಭು ಹಳ್ಳೂರ, ಕೃಷ್ಣಾ ಪಾಟೀಲ, ಪ್ರಭುರಾಜ ಪಾಟೀಲ, ಯಮನಪ್ಪ ಶಿರೂರ, ಬಸವರಾಜ ಹುನಗುಂದ, ಶ್ರೀಧರ ನಾಗರಬೆಟ್ಟ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಹದಿನೆಂಟು ವರ್ಷದ ಮಕ್ಕಳು ಯಾವುದೇ ಕ್ಷೇತ್ರದಲ್ಲಿ ಕೆಲಸ ಮಾಡಬಾರದು



ಬೀದರ, ಫೆ.10-

ಹದಿನೆಂಟು ವರ್ಷದ ಮಕ್ಕಳು ಯಾವುದೇ ಕ್ಷೇತ್ರದಲ್ಲಿ ಕೆಲಸ ಮಾಡಬಾರದೆಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪ್ರಕಾಶ ಅರ್ಜುನ ಬನಸೋಡೆ ತಿಳಿಸಿದರು.

ಅವರು ಸೋಮವಾರ ನಗರದ ನೌಬಾದನ ಶಾರಧಾ ಪ್ರೌಢ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಬಾಲ ಕಾರ್ಮಿಕ ಪದ್ದತಿ ನಿರ್ಮೂಲನೆ ಹಾಗೂ ಜೀತ ಕಾರ್ಮಿಕ ಪದ್ದತಿ ನಿರ್ಮೂಲನೆ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪಾಲಕರು ತಮ್ಮ ಮಕ್ಕಳನ್ನು ಕೆಲಸಕ್ಕೆ ಕಳಿಸದೆ ಶಾಲೆಗೆ ಕಳುಹಿಸಬೇಕು. ತಮಗೆ ಯಾವುದೇ ಮಗು ಕೆಲಸ ಮಾಡುವುದು ಕಂಡುಬಂದಲ್ಲಿ 1098ಕ್ಕೆ ಕರೆ ಮಾಡಿ ತಿಳಿಸಬೇಕೆಂದರು.

ಬೀದರ ಜಿಲ್ಲಾ ಕಾರ್ಮಿಕ ಅಧಿಕಾರಿ ಮಹೇಶ ಲಕ್ಷ್ಮಣ ಕುಳಲಿ ಮಾತನಾಡಿ, ಬಾಲ ಕಾರ್ಮಿಕ ಪದ್ದತಿ ಹಾಗೂ ಜೀತ ಕಾರ್ಮಿಕ ಪದ್ದತಿ ಇದೊಂದು ಅನಿಷ್ಠ ಪದ್ದತಿಯಾಗಿದ್ದು ಇವರ ನಿರ್ಮೂನೆಗಾಗಿ ಎಲ್ಲರು ಕೈಜೋಡಿಸಬೇಗಾಗಿ ಕರೆ ನಿಡೀದರು.

ಬೀದರ ವಕೀಲ ಶಿವಶರಣಪ್ಪ ಪಾಟೀಲ್ ಅವರು ತಮ್ಮ ಉಪನ್ಯಾಸ ನುಡಿಯಲ್ಲಿ ಬಾಲ ಕಾರ್ಮಿಕ ಪದ್ದತಿ ಹಾಗೂ ಜಿತ ಕಾರ್ಮಿಕ ಪದ್ದತಿ ನಿರ್ಮೂಲನೆ ಮಾಡುವದರ ಜೋತೆಗೆ ಪರಿಸರ ರಕ್ಷಣೆ ಬಗ್ಗೆ ''ಪರಿಸರ ರಕ್ಷಣೆ ನಮ್ಮ ನಿಮ್ಮೆಲ್ಲ ಹೋಣೆ'' ಎಂದು ತಿಳಿಸಿದರು.

ಬೀದರನ ಶಾರಧಾ ಪ್ರೌಢಶಾಲೆಯ ಮುಖ್ಯ ಗುರುಗಳು ಅನಿತಾ ಬೀರಾದರ ಮಾತನಾಡಿ, ನ್ಯಾಯಧೀಶರ ಹಾಗೂ ಎಲ್ಲಾ ಗಣ್ಯ ವ್ಯಕ್ತೀಗಳ ಹಿತನೂಡಿಯನ್ನು ಮಕ್ಕಳು ಪಾಲಿಸಿಕೊಂಡು ತಮ್ಮ ಜಿವನದಲ್ಲಿ ಒಳ್ಳೆವ್ಯಕ್ತೀಗಳಾಗಲು ಸಹಕರಿಯಾಗುವದೆಂದು ತಿಳಿಸಿದರು.

ಕಾರ್ಯಕ್ರಮಕ್ಕೂ ಮುಂಚಿತವಾಗಿ ಜಿಲ್ಲಾ ಪ್ರಧಾನ ಸತ್ರ ನ್ಯಾಯಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕರ್ಷರು ಹಾಗೂ ಹಿರಿಯ ಸಿವಿಲ್ ನ್ಯಾಯಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪ್ರಕಾಶ ಅರ್ಜುನ ಬನಸೋಡೆ ಅವರುಗಳು ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ದತಿ ನಿರ್ಮೂಲನೆ ಕುರಿತು, ಹಾಗೂ ಜೀತ ಪದ್ದತಿ ನಿರ್ಮೂಲನೆ ಕುರಿತು ಆಟೋ ಪ್ರಚಾರ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಬೀದರ ವಕೀಲರ ಸಂಘ, ಜಿಲ್ಲಾ ಕಾರ್ಮಿಕ ಅಧಿಕಾರಿಗಳು, ಯೋಜನಾ ನಿರ್ದೇಶಕರು ಬಾಲ ಕಾರ್ಮಿಕ ಯೋಜನೆ, ಕಾರ್ಮಿಕ ಇಲಾಖೆ ಸಿಬ್ಬಂದಿಗಳು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಬ್ದುಲ ಹಫೀಜ, ವಿಧ್ಯಸಾಗರ ಎಲ್.ಎ.ಡಿ.ಸಿ ವಕೀಲರು, ಸಿಬ್ಬಂದಿಗಳು ಹಾಗೂ ಕಾರ್ಮಿಕ ಇಲಾಖೆ ಸಿಬ್ಬಂಧಿವರ್ಗದವರು ಮತ್ತು ಶಾಲಾ ಮಕ್ಕಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ವಿದ್ಯಾಸಂಸ್ಥೆಯಲ್ಲಿಯೇ ಜಾತಿ, 371 (ಜೆ) ಪ್ರಮಾಣ ಪತ್ರ ವಿತರಣೆ

ಬಳ್ಳಾರಿ,ಫೆ.10-

ಜಿಲ್ಲೆಯ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ಇವರ ಸಹಯೋಗದಲ್ಲಿ ವಿದ್ಯಾಸಂಸ್ಥೆಗಳಲ್ಲಿಯೇ ವಿದ್ಯಾರ್ಥಿಗಳಿಗೆ ಜಾತಿ ಪ್ರಮಾಣ ಪತ್ರ ಮತ್ತು 371 (ಜೆ) ಪ್ರಮಾಣ ಪತ್ರಗಳನ್ನು ವಿತರಣೆ ಮಾಡುವ ವಿನೂತನ ಕಾರ್ಯಕ್ರಮ ಜಾರಿಗೆ ತರಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ತಿಳಿಸಿದ್ದಾರೆ.



ಈ ಕಾರ್ಯಕ್ರಮದಡಿ ಬಳ್ಳಾರಿ ಜಿಲ್ಲೆಯ ಸರ್ಕಾರಿ ಹಾಗೂ ಖಾಸಗಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ 10 ನೇ ತರಗತಿ ವಿದ್ಯಾರ್ಥಿಗಳಿಗೆ ಮತ್ತು ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರಥಮ ಪಿಯುಸಿ ಹಾಗೂ ದ್ವಿತೀಯ ಪಿಯುಸಿ ವರ್ಷದ ವಿದ್ಯಾರ್ಥಿಗಳಿಗೆ ವಿದ್ಯಾಸಂಸ್ಥೆಯಲ್ಲಿಯೇ ಜಾತಿ ಪ್ರಮಾಣ ಪತ್ರ ಹಾಗೂ 371 (ಜೆ) ಪ್ರಮಾಣ ಪತ್ರಗಳನ್ನು ವಿತರಿಸಲು ತೀರ್ಮಾನಿಸಲಾಗಿದೆ ಎಂದಿದ್ದಾರೆ.

ವಿದ್ಯಾರ್ಥಿಗಳು ಈ ಸೌಲಭ್ಯವನ್ನು ಪಡೆಯಲು ತಮ್ಮ ಪೋಷಕರ ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರ, ವಾಸ ಪ್ರಮಾಣ ಪತ್ರ ಹಾಗೂ ಇತರೆ ಸಂಬಂಧಿತ ದಾಖಲೆಗಳನ್ನು ತಮ್ಮ ತಮ್ಮ ಶಾಲೆ, ಕಾಲೇಜಿಗೆ ಕಡ್ಡಾಯವಾಗಿ ಸಲ್ಲಿಸಬೇಕಾಗಿರುತ್ತದೆ. ದಾಖಲೆಗಳ ಪರಿಶೀಲನೆಯ ನಂತರ ಪ್ರಮಾಣ ಪತ್ರಗಳನ್ನು ತ್ವರಿತವಾಗಿ ಶಾಲೆ ಮತ್ತು ಕಾಲೇಜುಗಳಲ್ಲೇ ವಿತರಿಸಲಾಗುವುದು.

ಈ ಕಾರ್ಯಕ್ರಮದಿಂದ ವಿದ್ಯಾರ್ಥಿಗಳ ಪೋಷಕರು ಕಚೇರಿಗಳಿಗೆ ಸುತ್ತಾಟವಿಲ್ಲದೆ, ತಮ್ಮ ಮಕ್ಕಳು ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾಸಂಸ್ಥೆಯಲ್ಲಿಯೇ ಪ್ರಮಾಣ ಪತ್ರಗಳನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ ಎಂದೂ ತಿಳಿಸಿದ್ದಾರೆ. ಸಂಬಂಧಿತ ಶಾಲೆ ಹಾಗೂ ಕಾಲೇಜುಗಳ ಮುಖ್ಯಸ್ಥರು, ಉಪನ್ಯಾಸಕರು ಮತ್ತು ಆಡಳಿತ ಮಂಡಳಿಗಳು ಈ ಕಾರ್ಯಕ್ರಮದ ಯಶಸ್ಸಿಗೆ ಸಂಪೂರ್ಣ ಸಹಕಾರ ನೀಡುವಂತೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಶ್ರೀ ವರ ಗುರು ಶ್ರೀ ಮರಳ ಸಿದ್ದೇಶ್ವರ ಮಠದಲ್ಲಿ ಎರಡನೇ ವರ್ಷದ ಮಹಾಪುರಾಣೋತ್ಸವ

ಯಾದಗಿರಿ,ಫೆ.10-

ಜಿಲ್ಲೆ ಸುರಪುರ ತಾಲೂಕಿನ ಹೆಗ್ಗಣ ದೊಡ್ಡಿ ಹಾಗೂ ಗೊಡ್ರಿಹಾಳ ಗ್ರಾಮದಲ್ಲಿ ಶ್ರೀ ಸರಸ್ವತಿ ತಾಯಿ ದೇವರು ಹಾಗೂ ಇವಾಗಿನ ಮಾತೋಶ್ರೀ ನಿಜಲಿಂಗಮ್ಮ ತಾಯಿ ದೇವರ ಧರ್ಮನ ಮಠ ಆಶ್ರಯದಲ್ಲಿ. ಮಹಾಶಿವರಾತ್ರಿ ಅಂಗವಾಗಿ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಪುರಾಣ ಕಾರ್ಯಕ್ರಮ ಏರ್ಪಡಿಸಲಾಗಿದೆ. ಈ ವರ್ಷ ಶ್ರೀ ದಾನಮ್ಮ ದೇವಿ ಚರಿತ್ರೆಯನ್ನು 11 ದಿನಗಳ ಕಾಲ ಆಯೋಜಿಸಲಾಗಿದೆ. ಪುರಾಣ ವಚನಕಾರರಾದ ಶ್ರೀ.ವೇ. ಮೂ. ಚಂದ್ರಶೇಖರಯ್ಯ ಹಿರೇಮಠ ಶಾಸ್ತ್ರಿಗಳು . ಸಾ// ಯಕ್ತಾಪುರ ಪೂಜ್ಯರು ನೆರವೇರಿಸಿ ಕೊಡಲಾಗುತ್ತಿದ್ದಾರೆ. ನಾಲ್ಕನೇ ದಿನ ಸೋಮವಾರ ಶ್ರೀ ಗುಡ್ಡಾಪುರ ದಾನೇಶ್ವರಿಯ ತೊಟ್ಟಿಲು ಕಾರ್ಯಕ್ರಮ. ಶೀಗಳು ಶ್ರೀ ಗುಡ್ಡಾಪುರದ ದಾನಮ್ಮನ ಹೇಗೆ ಹುಟ್ಟಿದ್ದು ಎಂದು ಚರಿತ್ರೆಯನ್ನು ಹೇಳಿ. ಹೆಗ್ಗಣ ದೊಡ್ಡಿ ಹಾಗೂ ಗೋಡ್ರಿಹಾಳದ ಗ್ರಾಮದ ಮುತ್ತೈದೆ ರಿಂದ ತೊಟ್ಟಿಲು ಪೂಜೆ ಮಾಡಿಸಿದರು.

ದೇವರಿದ್ದಾನೆ ಎಂದು ನಿಜಶರಣೆಯ ಜೀವನ ಚರಿತ್ರೆಯನ್ನು ಬಹಳ ಸೊಗಸಾಗಿ ಹೇಳಿದರು. ಹಾಗೆ ಪರಮಪೂಜ್ಯ ನಗನೂರಿನ ಶ್ರೀ.ಷ.ಬ್ರ. ಬ್ರಹ್ಮ ಸುಗುರೇಶ್ವರ ಶಿವಾಚಾರ್ಯರು ಸಂಸ್ಥಾನ ಮಠದ ಪೂಜ್ಯರು ಈ ಕಾರ್ಯಕ್ರಮಕ್ಕೆ ಆಗಮಿಸಿದ್ದರು. ಇವಾಗಿನ ಸಾಮಾಜದಲ್ಲಿ ಮೊಬೈಲಗಳ ಬಳಕೆಯಿಂದ ಆಧ್ಯಾತ್ಮಿಕ ಕಡಿಮೆಯಾಗುತ್ತಿದೆ. ದೇವರುಗಳಲ್ಲಿ ನಂಬಿಕೆ ಇಡಬೇಕು. ದೇವನೊಬ್ಬ ನಾಮ ಅಲವು. ಮೊದಲು ಹಿರಿಯರಲ್ಲಿ ಒಳ್ಳೆಯ ಸಂಸ್ಕಾರವಿರಬೇಕು. ಆಗ ಮಕ್ಕಳಲ್ಲಿಯೂ ಸಂಸ್ಕಾರ ಬರುತ್ತದೆ. ಎಷ್ಟೇ ಆಸ್ತಿ ಅಂತಸ್ತು ಇದ್ದರೆನ್ನು. ಒಳ್ಳೆಯ ಸಂಸ್ಕಾರವಿರಬೇಕು. ಮನುಷ್ಯನಲ್ಲಿ ಜ್ಞಾನ, ವಿದ್ಯೆ,ಬುದ್ಧಿ, ಮನಶಾಂತಿ ತುಂಬಿರಬೇಕು. ಆಗಲೇ ಒಬ್ಬ ವ್ಯಕ್ತಿಯ ವ್ಯಕ್ತಿತ್ವ ಪರಿಪೂರ್ಣವಾಗುವುದು. ಎಂದು ಪರಮಪೂಜ್ಯ ಸುಗುರೇಶ್ವರ ಶಿವಾಚಾರ್ಯರು ಸ್ಪಷ್ಟವಾಗಿ ತಿಳಿಸಿದರು. ಹಾಗೆ ಸಂಗೀತ ಗಾಯಕರಾದ ಸಿ ಸೋಮನಾಥ ಗವಾಯಿಗಳು ಯಾಳಗಿ, ತಬಲವಾದಕರು ಶ್ರೀ ಪ್ರಾಣೇಶ್ ಶಹಾಪುರ ಅವರು ಸಂಗೀತದ ಮೂಲಕ ಶ್ರೀ ದಾನೇಶ್ವರಿಯ ಚರಿತ್ರೆಯನ್ನು ವರ್ಣಿಸಿದರು. ಹಾಗೂ ಬಸವಣ್ಣನ ಸ್ಥಾನವನ್ನು ವಹಿಸಿಕೊಂಡಿರುವ ಸಿದ್ದಣ್ಣ ಸಾಹು ಅಂಗಡಿವರು ವಹಿಸಿಕೊಂಡಿದವರು. ಈ ಕಾರ್ಯಕ್ರಮವನ್ನು ಸುಸರ್ಜಿತಗೊಳಿಸಲು ಊರಿನ ಮುಖಂಡರಾದ. ಧರ್ಮರ ಮಠದ ಕಾರ್ಯಧ್ಯಕ್ಷರಾದ ರಾವಸಾಬ್ ಪಾಟೀಲ್ ಪೌಡೆಪ್ಪ ಪೂಜಾರಿ ಕೈಲಾಸಯ ಸ್ವಾಮಿ ಹಿರೇಮಠ ಶಾಂತಯ್ಯ ಸ್ವಾಮಿ ಹಿರೇಮಠ ಬಸನಗೌಡ ಕಂಚನಕಾವಿ ಉದ್ಯಮಿದಾರರು ಶಹಾಪುರ್

ಅನಿಲ್ ಮುಂಡಾಸ್ ಶಾಹಪುರ್ ಸಾಹೇಬಗೌಡ ಮಲಿಪಾಟೀಲ್ ಪರ್ದಪ್ಪ ಸಾಹುಕಾರ್ ಮಳ್ಳಿ ಮಕಬುಲ ಪಟೇಲ್ ಅಂಗಡಿ ದೇವಣ್ಣ ದೊರಿ ಸಾಕಿನ ಗ್ರಾಮ ಪಂಚಾಯತಿ ಅಧ್ಯಕ್ಷ ಮಡಿವಾಳಪ್ಪ ಹೆಗ್ಗಣದೊಡ್ಡಿ ಸಿದ್ದಣ್ಣ ಸಾಹುಕಾರ ಅಂಗಡಿ ಮಾರಳಸಿದ್ದಪ್ಪ ನಿರೂಪಣೆ ರಮೇಶ್ ಎನ್ ಸಾಹುಕಾರ್ ಹೆಗ್ಗನದೊಡ್ಡಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಜಿಲ್ಲಾ ಆಯುಷ್ ಇಲಾಖೆಯ ಕಚೇರಿ ಸ್ಥಳಾಂತರ

ಕಲಬುರಗಿ,ಫೆ.10-

ಈ ಹಿಂದೆ ಕಲಬುರಗಿ ನಗರದ ಗಾಜಿಪುರ ಅಪ್ಪರ ಕಂಪೌಂಡ್‌ದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಜಿಲ್ಲಾ ಆಯುಷ್ ಕಚೇರಿಯನ್ನು 2026ರ ಫೆಬ್ರವರಿ 5 ರಿಂದ ಜಿಲ್ಲಾ ಆಯುಷ್ ಅಧಿಕಾರಿಗಳು, ಸರ್ಕಾರಿ ಯುನಾನಿ ಆಸ್ಪತ್ರೆ (50 ಹಾಸಿಗೆ), ಆಳಂದ ಚೆಕ್ ಪೋಸ್ಟ್ ಹತ್ತಿರ, ದುಬೈ ಕಾಲೋನಿ, 1ನೇ ಮಹಡಿ, ಕಲಬುರಗಿ-585101 ವಿಳಾಸಕ್ಕೆ ಸ್ಥಳಾಂತರಗೊಂಡಿರುತ್ತದೆ. ಸದರಿ ಕಚೇರಿಗೆ ಸಂಬಂಧಿಸಿದ ಅರೆ-ಕಾಲಿಕ ಪತ್ರಗಳು ಮತ್ತು ಇನ್ನಿತರೆ ಪತ್ರ ವ್ಯವಹಾರಗಳನ್ನು ಹೊಸ ವಿಳಾಸಕ್ಕೆ ಕಳುಹಿಸಬೇಕೆಂದು ಕಲಬುರಗಿ ಜಿಲ್ಲಾ ಆಯುಷ್ ಅಧಿಕಾರಿಗಳು ತಿಳಿಸಿದ್ದಾರೆ.

ನಿಮ್ಮೂರು ಸುದ್ದಿ

ಸಂಪಾದಕೀಯ

ನಕ್ಸಲ್ ನಿಗ್ರಹದ ನೆಪದಲ್ಲಿ ಪ್ರಕೃತಿ ಸಂಪತ್ತಿನ ಲೂಟಿಗಿಳಿಯಿತೇ ಸರ್ಕಾರ?



ಅರಣ್ಯ ಸಂಪತ್ತನ್ನು ನಂಬಿ ಬದುಕುತ್ತಿದ್ದ ಬುಡಕಟ್ಟು ಜನಾಂಗ; ಪ್ರಕೃತಿಯನ್ನು ಪೊರೆಯುತ್ತಿದ್ದ ಆದಿವಾಸಿಗಳು ಮತ್ತು ಅಕ್ರಮ ಗಣಿಗಾರಿಕೆಯ ವಿರುದ್ಧ ಹೋರಾಡುತ್ತಿದ್ದ ನಕ್ಸಲರನ್ನು ಸರ್ಕಾರ ಸದ್ದಡಗಿಸಿದೆ. ಈಗ ಸರ್ಕಾರವೇ ಕಾರ್ಪೊರೇಟ್ ಕುಳಗಳಿಗೆ ಪರವಾನಗಿ ನೀಡಿ, ಪ್ರಕೃತಿ ಸಂಪತ್ತನ್ನು ಲೂಟಿ ಹೊಡೆಯಲು ರಹದಾರಿ ನಿರ್ಮಿಸಿಕೊಟ್ಟಿದೆ.

ದೇಶದಿಂದ ನಕ್ಸಲ್ ಭೀತಿಯನ್ನು ಸಂಪೂರ್ಣವಾಗಿ ಅಳಿಸಿಹಾಕಲು ಡಬಲ್ ಎಂಜಿನ್ ಸರ್ಕಾರ ಪ್ರಯತ್ನಿಸುತ್ತಿದೆ. ಈ ವರ್ಷದ ಮಾರ್ಚ್ 31ರೊಳಗೆ ನಕ್ಸಲ್ ನಿರ್ಮೂಲನೆ ಮಾಡಲಾಗುವುದು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಗಡುವು ನೀಡಿದ್ದಾರೆ.

ಛತ್ತೀಸ್‌ಗಢದ ರಾಯ್‌ಪುರದಲ್ಲಿ ನಡೆದ ಉನ್ನತ ಮಟ್ಟದ ಭದ್ರತಾ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಕೇಂದ್ರ ಗೃಹ ಸಚಿವ ಅಮಿತ್ ಶಾ, ಮಾವೋವಾದಿಗಳ ಹಣಕಾಸು ಜಾಲವನ್ನು ಭೇದಿಸುವಲ್ಲಿ ಯಶಸ್ವಿಯಾಗಿದ್ದೇವೆ. ನಕ್ಸಲರನ್ನು ದೇಶದಿಂದ ನಿರ್ಮೂಲನೆ ಮಾಡುತ್ತೇವೆ ಎಂಬ ದೃಢವಿಶ್ವಾಸದಲ್ಲಿದ್ದಾರೆ.

ಅದಕ್ಕೆ ಪೂರಕವಾಗಿ, ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಸರ್ಕಾರ ರಚನೆಯಾದ ನಂತರ, ನಕ್ಸಲರ ನಿರ್ವಹಣೆ ವಿಧಾನ ಕೂಡ ಬದಲಾಗಿದೆ. ಈ ಅವಧಿಯಲ್ಲಿ ನಕ್ಸಲರ ದಾಳಿಯಲ್ಲಿ ನಾಗರಿಕರು ಮೃತಪಟ್ಟ ಸಂಖ್ಯೆಯೂ ಗಣನೀಯವಾಗಿ ಇಳಿಕೆಯಾಗಿದೆ. ಸರ್ಕಾರದ ಮುಂದೆ ಶಸ್ತ್ರತ್ಯಾಗ ಮಾಡಿ ಶರಣಾಗುವ ನಕ್ಸಲರ ಸಂಖ್ಯೆಯೂ ಏರಿಕೆಯಾಗಿದೆ. ಆದರೆ ಮಧ್ಯ ಮತ್ತು ಪೂರ್ವ ಭಾರತದ ಅರಣ್ಯ ಆದಿವಾಸಿ ಪ್ರದೇಶಗಳಲ್ಲಿ ನಕ್ಸಲ್ ಚಟುವಟಿಕೆ ಈಗಲೂ ಜೀವಂತವಿದೆ. ಇದನ್ನು ರೆಡ್ ಕಾರಿಡಾರ್ ಎಂದು ಕರೆಯಲಾಗುತ್ತದೆ. ದೇಶದಲ್ಲೇ ಅತ್ಯಧಿಕ ನಕ್ಸಲ್ ಚಟುವಟಿಕೆಗಳು ಇರುವ ರಾಜ್ಯಗಳೆಂದರೆ, ಛತ್ತೀಸ್‌ಗಢ, ಜಾರ್ಖಂಡ್, ಒಡಿಶಾ, ಬಿಹಾರ ಮತ್ತು ಮಹಾರಾಷ್ಟ್ರ ಈಗ ಛತ್ತೀಸ್‌ಗಢದ ರಾಯ್‌ಪುರದಿಂದಲೇ ಗೃಹ ಸಚಿವ ಅಮಿತ್ ಶಾ, ನಕ್ಸಲ್ ನಿಗ್ರಹ ಕುರಿತು ಮಾತನಾಡಿರುವುದು.

ಗೃಹ ಸಚಿವ ಅಮಿತ್ ಶಾ ಹೀಗೆ ಮಾತನಾಡಲು ಕಾರಣವೂ ಇದೆ. ಅವರು ಪ್ರತಿನಿಧಿಸುವ ಸಂಘಪರಿವಾರ ಮತ್ತು ಬಿಜೆಪಿ ಕಟ್ಟಾ ಬಲಪಂಥೀಯರು. ಎಡಪಂಥೀಯ ನಕ್ಸಲರನ್ನು ಅವರು ಸಹಿಸುವುದಿಲ್ಲ. ಸರ್ಕಾರಿ ದಾಖಲೆಗಳಲ್ಲೂ ನಕ್ಸಲರನ್ನು ಎಡಪಂಥೀಯ ತೀವ್ರಗಾಮಿಗಳು ಎಂದೇ ಹೆಸರಿಸಲಾಗುತ್ತದೆ. ನಕ್ಸಲ್‌ವಾದವನ್ನು ದೇಶದ ಕಾನೂನು ಉಗ್ರವಾದ ಎಂದೇ ಪರಿಗಣಿಸುತ್ತದೆ. ಇದರ ಬಲದಿಂದಲೇ ನಕ್ಸಲರನ್ನು ಬಗ್ಗುಬಡಿದು, ಅಭಿವೃದ್ಧಿಯ ನೆಪದಲ್ಲಿ ಪ್ರಕೃತಿ ಸಂಪತ್ತು ಲೂಟಿ ಮಾಡುವುದು ಸರ್ಕಾರಕ್ಕೆ ಸುಲಭವಾಗಿದೆ.

ಈ ಹಿಂದಿನ ಯುಪಿಎ ಸರ್ಕಾರ ಕೂಡ ನಕ್ಸಲರ ಶರಣಾಗತಿ ಮತ್ತು ಪುನರ್ವಸತಿಗೆ ಆದ್ಯತೆ ನೀಡಿತ್ತು. ಪರಿಸ್ಥಿತಿ ಕೈ ಮೀರಿದಾಗ ಬಲಪ್ರಯೋಗವನ್ನೂ ನಡೆಸಿತ್ತು. 2014ರ ನಂತರ, ಬಿಜೆಪಿ ಸರ್ಕಾರ ಬಂದಮೇಲೆ, ಈ ಸರ್ಕಾರವೂ ಇದೇ ನೀತಿಯನ್ನು ಇನ್ನಷ್ಟು ತೀವ್ರವಾಗಿ ಜಾರಿಗೆ ತಂದಿತು. ಇದರ ಪರಿಣಾಮವಾಗಿ 10 ವರ್ಷಗಳಲ್ಲಿ ಸಾವಿರಾರು ಸಂಖ್ಯೆಯಲ್ಲಿ ನಕ್ಸಲರು ಶರಣಾದರು. ಇದೇ ಸಂದರ್ಭದಲ್ಲಿ, ಅಳಿದುಳಿದ ನಕ್ಸಲರ ಕುರಿತು ಗೃಹ ಸಚಿವ ಅಮಿತ್ ಶಾ ಅವರ ನಕ್ಸಲ್ ಮುಕ್ತ ಹೇಳಿಕೆ ಮಹತ್ವ ಪಡೆಯುತ್ತದೆ. ಜೊತೆಗೆ ನಕ್ಸಲರು ಶಸ್ತ್ರತ್ಯಾಗ ಮಾಡಿ ಶರಣಾದರೆ ಪುನರ್ವಸತಿ ಕಲ್ಪಿಸುವುದಾಗಿ ಘೋಷಿಸಿರುವುದು, ಪ್ರಜಾಪ್ರಭುತ್ವದ ಆಶಯಕ್ಕೆ ಹತ್ತಿರವಾಗಿಯೇ ಇದೆ.

2019ರಲ್ಲಿ ಅಮಿತ್ ಶಾ ಗೃಹ ಸಚಿವರಾದ ನಂತರ ನಕ್ಸಲ್ ಚಟುವಟಿಕೆಗಳನ್ನು ನಿಯಂತ್ರಿಸುವಲ್ಲಿ ಗಣನೀಯ ಪ್ರಗತಿ ಸಾಧಿಸಲಾಗಿದೆ. ಗೃಹ ಮಂತ್ರಾಲಯದ ಅಧಿಕೃತ ಮಾಹಿತಿ ಮತ್ತು ವರದಿಗಳ ಪ್ರಕಾರ, 2019ರಲ್ಲಿ ನಕ್ಸಲ್ ಪ್ರಭಾವಿತ ಜಿಲ್ಲೆಗಳ ಸಂಖ್ಯೆ 90 ಇದ್ದದ್ದು, 2025ರ ಹೊತ್ತಿಗೆ ಕೇವಲ 12ಕ್ಕೆ ಇಳಿದಿದೆ. ಛತ್ತೀಸ್‌ಗಢವೊಂದರಲ್ಲಿಯೇ 237 ನಕ್ಸಲರನ್ನು ಹತ್ಯೆ ಮಾಡಲಾಗಿದೆ, 812 ಮಂದಿಯನ್ನು ಬಂಧಿಸಲಾಗಿದೆ ಮತ್ತು 723 ಮಂದಿ ಶರಣಾಗಿದ್ದಾರೆ.

ಬಲಪಂಥೀಯ ಒಲವುಳ್ಳ ಸುದ್ದಿಮಾಧ್ಯಮಗಳು ಮತ್ತು ಪತ್ರಕರ್ತರಿಗೆ ಇದು ಗೃಹ ಸಚಿವ ಅಮಿತ್ ಶಾ ಅವರ ಸಾಧನೆಯಂತೆ ಕಾಣಿಸುತ್ತದೆ. ಆದ್ಯತೆ ನೀಡಿ ಪ್ರಕಟಿಸುತ್ತವೆ, ಪ್ರಚಾರ ಒದಗಿಸುತ್ತವೆ. ಅದನ್ನು ಓದುವ, ಕೇಳುವ, ನೋಡುವ ದೇಶದ ಪ್ರಜೆಗಳಿಗೂ, ಬಿಜೆಪಿ ಸರ್ಕಾರ ಒಳ್ಳೆಯ ಕೆಲಸವನ್ನೇ ಮಾಡುತ್ತಿದೆ ಎನಿಸುತ್ತದೆ. ಈ ನಂಬಿಸುವ ನಾಟಕದಲ್ಲಿ ಗೋದಿ ಮೀಡಿಯಾ ಬಿಜೆಪಿಗರ ನೆರವಿಗೆ ನಿಂತಿದೆ. ಹೀಗಾಗಿ ಬಿಜೆಪಿಗೆ ಎಲ್ಲವೂ ಸಲೀಸು ಎನಿಸಿದೆ. ದೇಶವನ್ನು ನಕ್ಸಲ್ ಮುಕ್ತ ಮಾಡಿದ ಕೀರ್ತಿಗೆ ಬಿಜೆಪಿ ಭಾಜನವಾಗುತ್ತಿದೆ.

ಇದನ್ನು ತಮ್ಮ ಗೆಲುವೆಂದು ಪ್ರಧಾನಿ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಅವರು ಹೇಳಿಕೊಳ್ಳುತ್ತಿದ್ದಾರೆ. ಹೌದು, ಸದ್ಯಕ್ಕೆ ಸೋತವರು ನಕ್ಸಲರಾಗಿರಬಹುದು. ಆದರೆ ಗೆದ್ದವರು ಯಾರು? ಸರ್ಕಾರವೇ, ಕಾರ್ಪೊರೇಟ್ ಕುಳಗಳೇ?


ಅರಣ್ಯ ಸಂಪತ್ತನ್ನು ನಂಬಿ ಬದುಕುತ್ತಿದ್ದ ಬುಡಕಟ್ಟು ಜನಾಂಗ; ಪ್ರಕೃತಿಯನ್ನು ಪೊರೆಯುತ್ತಿದ್ದ ಆದಿವಾಸಿಗಳು ಮತ್ತು ಅಕ್ರಮ ಗಣಿಗಾರಿಕೆಯ ವಿರುದ್ಧ ಹೋರಾಡುತ್ತಿದ್ದ ನಕ್ಸಲರನ್ನು ಸರ್ಕಾರ ಸದ್ದಡಗಿಸಿದೆ. ಈಗ ಸರ್ಕಾರವೇ ಕಾರ್ಪೊರೇಟ್ ಕುಳಗಳ ಮುಂದೆ ನಡುಬಗ್ಗಿ ನಿಂತಿದೆ. ಅಭಿವೃದ್ಧಿಯ ನೆಪದಲ್ಲಿ ಪರವಾನಗಿ ನೀಡಿ, ಪ್ರಕೃತಿ ಸಂಪತ್ತನ್ನು ಲೂಟಿ ಹೊಡೆಯಲು ರಹದಾರಿ ನಿರ್ಮಿಸಿಕೊಟ್ಟಿದೆ. ಮತ್ತು ಆ ಕಾರ್ಪೊರೇಟ್ ಕಂಪನಿಗಳಿಂದ ಕೋಟ್ಯಂತರ ರೂಪಾಯಿ ದೇಣಿಗೆ ಪಡೆಯುತ್ತಿದೆ.

ಇತ್ತ, ಅಮಿತ್ ಶಾ ಅವರು ಛತ್ತೀಸ್‌ಗಢದ ರಾಯ್‌ಪುರದಲ್ಲಿ ಕುಳಿತು ನಕ್ಸಲ್ ನಿಗ್ರಹದ ಬಗ್ಗೆ ಮಾತನಾಡುತ್ತಿರುವಾಗಲೇ, ಅತ್ತ ಅರಣ್ಯ ಸಂಪತ್ತನ್ನು, ಸಮೃದ್ಧ ಖನಿಜ ನಿಕ್ಷೇಪಗಳನ್ನು ಲೂಟಿ ಮಾಡಲು ಹಿಂಜರಿಯುತ್ತಿದ್ದ ಕಾರ್ಪೊರೇಟ್ ಕಂಪನಿಗಳು ಕೇಕೆ ಹಾಕುತ್ತಿವೆ. ಈ ಕಾರ್ಪೊರೇಟ್ ಕಂಪನಿಗಳು ಎಂದರೆ ಬೇರಾರೂ ಅಲ್ಲ, ಅದು ಪ್ರಧಾನಿ ಮೋದಿಯವರ ಅತ್ಯಾಪ್ತ ಗೌತಮ್ ಅದಾನಿ. ಈಗ ಇವರು ಪ್ರಭುತ್ವವನ್ನೇ ರಕ್ಷಣೆಗೆ ನಿಲ್ಲಿಸಿಕೊಂಡಿದ್ದಾರೆ. ಪ್ರಜಾತಾಂತ್ರಿಕ ಮಾರ್ಗದಲ್ಲಿ ದನಿ ಎತ್ತುತ್ತಿದ್ದ ಆದಿವಾಸಿಗಳು, ಬುಡಕಟ್ಟು ಜನಾಂಗ ಮತ್ತು ನಕ್ಸಲರ ವಿರುದ್ಧ ಪೊಲೀಸರನ್ನು ಬಳಸಿಕೊಂಡು ಉಸಿರೆತ್ತದಂತೆ ಮಾಡಿದ್ದಾರೆ.

ಗೌತಮ್ ಅದಾನಿಯವರ ನೇತೃತ್ವದ ಅದಾನಿ ಗ್ರೂಪ್ ಭಾರತದಲ್ಲಿ ಮುಖ್ಯವಾಗಿ ಕಲ್ಲಿದ್ದಲು, ಕಬ್ಬಿಣದ ಅದಿರು ಮತ್ತು ಬಾಕ್ಸೈಟ್ ಗಣಿಗಾರಿಕೆಯಲ್ಲಿ ತೊಡಗಿದ್ದು, ಪ್ರಸ್ತುತ ಹಲವು ರಾಜ್ಯಗಳಲ್ಲಿ ಕಾರ್ಯನಿರ್ವಹಿಸುತ್ತಿದೆ. ಅದರಲ್ಲೂ ಮುಖ್ಯವಾಗಿ ಛತ್ತೀಸ್‌ಗಢದಲ್ಲಿಯೇ ಅದಾನಿ ಗ್ರೂಪ್ ಅತಿ ದೊಡ್ಡ ಗಣಿಗಾರಿಕೆ ಕೇಂದ್ರ ಹೊಂದಿದೆ.

ಇತ್ತೀಚಿಗೆ ಅರಾವಳಿ ಬೆಟ್ಟಗಳನ್ನು ಬಗೆಯಲು ಸರ್ಕಾರವೇ ಮುಂದೆ ನಿಂತು ಅದಾನಿ ಕಂಪನಿಗೆ ಪರವಾನಗಿ ಕೊಟ್ಟದ್ದನ್ನು ಜನ ಉಗ್ರವಾಗಿ ವಿರೋಧಿಸಿದರು. ಅದು ದೇಶದಾದ್ಯಂತ ಸದ್ದು ಮಾಡಿತು. ಜನವಿರೋಧಕ್ಕೆ ಬೆದರಿದ ಸರ್ಕಾರ ಮತ್ತು ಅದಾನಿ, ಸದ್ಯಕ್ಕೆ ಸುಮ್ಮನಾಗಿದ್ದಾರೆ. ಕಾಲ ಸರಿದಂತೆ, ಅವರು ಅಂದುಕೊಂಡದ್ದನ್ನು ಮಾಡುತ್ತಾರೆ.

ಈಗ ಹೇಳಿ, ನಕ್ಸಲರ ನಿಗ್ರಹ ಯಾರಿಗಾಗಿ? ದೇಶದ ಪ್ರಕೃತಿ ಸಂಪತ್ತನ್ನು ಲೂಟಿ ಹೊಡೆಯುತ್ತಿರುವ ಅದಾನಿ ಗ್ರೂಪ್ ಬೆನ್ನಿಗೆ ನಿಂತಿರುವ ಪ್ರಧಾನಿ ಮತ್ತು ಗೃಹ ಸಚಿವರು, ದೇಶಭಕ್ತರೇ? ಇವರು ದೇಶ ಉದ್ಧಾರ ಮಾಡುವವರೇ?



ಫೆ.12 ರಂದು ಕೇಂದ್ರ ಸರ್ಕಾರದ ಕಾರ್ಮಿಕ ವಿರೋಧಿ ನೀತಿಗಳ ವಿರುದ್ಧ ಸಾರ್ವತ್ರಿಕ ಮುಷ್ಕರ :ಬಸವಲಿಂಗಪ್ಪ

ಮಾನ್ವಿ: ಕೇಂದ್ರ ಸರ್ಕಾರ ಸಾರ್ವಜನಿಕ ವಲಯದ ಉದ್ಯಮಗಳು, ಮತ್ತು ಸಾರ್ವಜನಿಕ ಸೇವೆಗಳನ್ನನು ಖಾಸಗಿಕರಣ ಮಾಡುವತ್ತ ಮುಂದಾಗುತ್ತಿದೆ, ನರೇಗಾ ಯೋಜನೆಯನ್ನು ವಿ.ಬಿ.ಜಿ, ರಾವ್,ಜೀ ಎಂದು ಬದಲಾಯಿಸುವ ಮೂಲಕ ಜನರ ಉದ್ಯೋಗ ಖಾತ್ರಿಯ ಹಕ್ಕನ್ನೇ ಕಸಿದುಕೊಳ್ಳುತ್ತಿದೆ ಎಂದು ಅಖಿಲ ಭಾರತ ಕಿಸಾನ ಸಂಘಟನೆ ರಾಜ್ಯಾಧ್ಯಕ್ಷ ಬಸವಲಿಂಗಪ್ಪ ಆರೋಪಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಮಾತನಾಡಿ ಕೇಂದ್ರ ಕಾರ್ಮಿಕ ಸಂಘಟನೆಗಳ ಕರೆಯ ಮೇರೆಗೆ ಫೆ.12 ರಂದು ಹಮ್ಮಿಕೊಂಡಿರುವ ಸಾರ್ವತ್ರಿಕ ಮುಷ್ಕರಕ್ಕೆ ಅಖಿಲ ಭಾರತ ಕಿಸಾನ ಸಂಘಟನೆ ಕೂಡ ಬೆಂಬಲ ನೀಡಲಿದೆ ಅಂದು ಕಾರ್ಮಿಕರು,ರೈತರು, ಕೃಷಿ ಕೂಲಿಕಾರರು ಸ್ವಯಂ ಪ್ರೇರಿತರಾಗಿ ಕೆಲಸವನ್ನು ಸ್ಥಗಿತ ಗೊಳಿಸಿ ಕೇಂದ್ರ ಸರ್ಕಾರದ ಕಾರ್ಮಿಕ ವಿರೋಧಿ ಸಂಹಿತೆಗಳ ವಿರುದ್ಧ ಪಟ್ಟಣದಲ್ಲಿ ಪ್ರತಿಭಟನೆಯನ್ನು ನಡೆಸಲಿದ್ದಾರೆ ಅದ್ದರಿಂದ ಮಾನ್ವಿ ಪಟ್ಟಣದ ವ್ಯಾಪಾರಸ್ಥರು ಸ್ವಯಂ ಪ್ರೇರಿತವಾಗಿ ಬಂದ್‌ಗೆ ಬೆಂಬಲ ನೀಡಬೇಕು ಎಂದು ಕೋರಿದರು.

ಈ ಸಂಧರ್ಭದಲ್ಲಿ ತಾಲೂಕು ಸಮಿತಿ ಅಧ್ಯಕ್ಷರಾದ ವಿ.ಮುದುಕಪ್ಪ ತಾಲೂಕು ಮುಖಂಡರಾದ ಯಲಪ್ಪನಾಯಕ, ತಾ.ಸಮಿತಿ ಸದಸ್ಯರಾದ ಪ್ರಸಾದ ಕುರ್ಡಿ, ಆಂಜನೇಯ್ಯ ನಾಯಕ, ದಿಲೀಪ್ ಟೈಲರ ತಾ. ಉಪಾಧ್ಯಕ್ಷರಾದ ಆನಂದ ಭೋವಿ, ಇದ್ದರು.

ಮೆಟ್ರೋ ದರ ಏರಿಕೆ; ರಾಜ್ಯ ಅಥವಾ ಕೇಂದ್ರ, ಯಾರು ಹೊಣೆ?

ದರ ನಿಗದಿ ಸಮಿತಿ ಶಿಫಾರಸು ಮಾಡಿದ ಅವಧಿಯೊಳಗೆ ಮೆಟ್ರೋ ಆಡಳಿತವು ಒಪಲೇಬೇಕಿದೆ ಮತ್ತು ಜಾರಿ ಮಾಡಬೇಕು. ಆದರೆ, ರಾಜ್ಯಸರ್ಕಾರಕ್ಕೆ ಅಥವಾ ಬಿಎಂಆರ್‌ಸಿಎಲ್‌ಗೆ ಶಿಫಾರಸುಗಳನ್ನು ರದ್ದುಗೊಳಿಸುವ ಅಥವಾ ಉಲ್ಲಂಘಿಸುವ ಕಾನೂನಾತ್ಮಕ ಅಧಿಕಾರವಿರುವುದಿಲ್ಲ. ಜೊತೆಗೆ ರಾಜ್ಯ ಸರ್ಕಾರ ಮೆಟ್ರೋ ದರ ನಿಗದಿ ಆಗಲಿ ಅಥವಾ ಪರಿಷ್ಕರಣೆ ಆಗಲಿ ಮಾಡಲು ಬರುವುದಿಲ್ಲ.

ದೇಶದಲ್ಲೇ ಎರಡನೇ ಅತಿದೊಡ್ಡದಾದ 96.10 ಕಿ.ಮೀ ಮೆಟ್ರೋ ಜಾಲ ಹೊಂದಿರುವ ಬೆಂಗಳೂರಿನ ನಮ್ಮ ಮೆಟ್ರೋ ಕೇವಲ ಸಾರಿಗೆ ವ್ಯವಸ್ಥೆ ಮಾತ್ರವಲ್ಲ; ನಗರದ ಬೆಳವಣಿಗೆಗೆ ಸಕಾರವಾಗುವ ಹಾಗೂ ಲಕ್ಷಾಂತರ ಉದ್ಯೋಗಿಗಳು, ವಿದ್ಯಾರ್ಥಿಗಳು, ಹಾಗೂ ಸಾಮಾನ್ಯ ಕುಟುಂಬಗಳ ಕನಸುಗಳನ್ನು ಹೊತ್ತೊಯ್ಯುವ ಜೀವನಾಡಿಯ ಸಂಕೇತವಾಗಿದೆ. ಎಲ್ಲರಿಗೂ ಸುಲಭವಾಗಿ ಸಿಗಬೇಕಾದ ನಮ್ಮ ಮೆಟ್ರೋ, ಈಗ ಮಧ್ಯಮ ವರ್ಗದವರಿಂದ ದೂರವಾಗುವಂತೆ ಭಾಸವಾಗುತ್ತಿದೆ.

ಈಚಿನ ದಿನಗಳಲಿ ಮೆಟ್ರೋ ಪ್ರಯಾಣ ದರ ದುಬಾರಿಯಾಗುತ್ತಿದೆ. ಗಗನ ಮುಟ್ಟುತ್ತಿರುವ ಅಗತ್ಯ ವಸ್ತುಗಳ ಬೆಲೆ ಏರಿಕೆಯ ನಡುವೆಯೇ ಮೆಟ್ರೋ ಪ್ರಯಾಣ ದರ ಪರಿಷ್ಕರಣೆಯೂ ಪ್ರಯಾಣಿಕರಿಗೆ ಆತಂಕ ಉಂಟುಮಾಡುತ್ತಿದೆ. ಆಡಳಿತ ಮತ್ತು ವಿರೋಧ ಪಕ್ಷಗಳು, ಪ್ರತಿದಿನದ ಸಂಚರಿಸುವ ಲಕ್ಷಾಂತರ ಪ್ರಯಾಣಿಕರಿಗೆ ಮೆಟ್ರೋ ದರ ಅನುಕೂಲವಾಗುವಂತೆ ಮಾಡುವ ಬದಲು ರಾಜಕೀಯ ಮಾಡುತ್ತಾ ಬೀದಿಗೆ ಬಂದಿವೆ. ಒಂದು ಕಡೆ ರಾಜ್ಯದಲ್ಲಿರುವ ಕಾಂಗ್ರೆಸ್ ಸರ್ಕಾರ, ಕೇಂದ್ರದತ್ತ ಬೊಟ್ಟು ಮಾಡಿದರೆ, ಕೇಂದ್ರದ ಮಂತ್ರಿಗಳು ಮತ್ತು ರಾಜ್ಯದ ಸಂಸದ ತೇಜಸ್ವಿ ಸೂರ್ಯ ರಾಜ್ಯ ಸರ್ಕಾರವೇ ಕಾರಣ ಎಂದು ಬೀದಿಯಲ್ಲಿ ಹೈಡ್ರಾಮಾ ಮಾಡುತ್ತಿದ್ದಾರೆ. ಇವರಿಬ್ಬರ ನಾಟಕದಲ್ಲಿ ಸಾಮಾನ್ಯ ಪ್ರಯಾಣಿಕರ ಪಾಡನ್ನು ಕೇಳುವವರ್ಯಾರು?

ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ (ಬಿಎಂಆರ್‌ಸಿಎಲ್) ಇದೇ ಫೆ.09 ರಿಂದ ಶೇ 5 ರಷ್ಟು ಮೆಟ್ರೋ ದರವನ್ನು ಏರಿಕೆ ಮಾಡಲಾವುದು ಎಂದು ತಿಳಿಸಿತ್ತು. ಈ ಏರಿಕೆಯಿಂದ ಕನಿಷ್ಠ ಬೆಲೆ 10 ರೂಪಾಯಿಂದ 11 ರೂಪಾಯಿಗೆ ಮತ್ತು ಗರಿಷ್ಠ 90 ರೂಪಾಯಿಂದ 95ರೂಗಳಿಗೆ ಏರಿಕೆಯಯಾಗುತ್ತಿತ್ತು.

ಶುಲ್ಕ ನಿಗದಿ ಸಮಿತಿ (ಎಫ್‌ಎಫ್‌ಸಿ) ವಾರ್ಷಿಕ ದರ ಪರಿಶೀಲನೆ ಮಾಡಿ ಶಿಫಾರಸ್ಸು ಮಾಡಿದ ನಂತರ ಬಿಎಂಆರ್‌ಸಿಎಲ್ ದರ ಏರಿಕೆಯ ಅನುಮೋದನೆ ಮುದ್ರೆ ಒತ್ತಿತ್ತು. ಈ ದರ ಪರಿಷ್ಕರಣೆಗೆ ಕೇಂದ್ರ ಅಥವಾ ರಾಜ್ಯ ಸರ್ಕಾರದಿಂದ ಯಾವುದೇ ಅನುಮತಿ ಅಗತ್ಯವಿಲ್ಲದೆ ಜಾರಿಗೆ ಬರಲಿದೆ ಎಂದು ಬಿಎಂಆರ್‌ಸಿಎಲ್ ಅಧಿಕಾರಿಗಳು ತಿಳಿಸಿದ್ದರು. ಆದರೆ ಈ ಪರಿಷ್ಕರಣೆಗೆ ಸದ್ಯ ತಾತ್ಕಾಲಿಕ ತಡೆ ಬಿದ್ದಿದೆ.

ದರ ಏರಿಕೆ ಮಾಡದಂತೆ ಕೇಂದ್ರ ನಗರ ವ್ಯವಹಾರಗಳ ಸಚಿವ ಮನೋಹರ್ ಲಾಲ್ ಖಟ್ಟರ್ ಅವರು ನೀಡಿದ ಸೂಚನೆ ಮೇರೆಗೆ ಭಾನುವಾರ(ಫೆ.08) ರಾತ್ರಿ ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕ ಜೆ.ರವಿಶಂಕರ್ ಅವರು ದರ ಏರಿಕೆಯನ್ನು ಮುಂದೂಡುವ ಸೂಚನೆ ನೀಡಿದ್ದಾರೆ.

ಇದರ ನಡುವೆ ಬಿಜೆಪಿಯ ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ಖಾಲಿ ಟ್ರಂಕ್ ಹಿಡಿದು ರಾಷ್ಟ್ರೀಯ ವಿದ್ಯಾಲಯ ರಸ್ತೆ ಮೆಟ್ರೋ ನಿಲ್ದಾಣದ ಬಳಿ ಪ್ರತಿಭಟನೆಗೆ



ಇಳಿದಿದ್ದರು. ಮೆಟ್ರೋ ನಿಲ್ದಾಣದಲ್ಲಿ ಪೂರ್ವಾನುಮತಿ ಪಡೆಯದೆ ಪ್ರತಿಭಟನೆಗೆ ಮುಂದಾಗಿದ್ದಕ್ಕೆ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಸಂಸತ್ತಿನಲ್ಲಿ ಮೆಟ್ರೋ ಪ್ರಯಾಣದ ಬಗ್ಗೆ ಧ್ವನಿ ಎತ್ತದ ಸಂಸದ ಸೂರ್ಯ ಬೀದಿಗೆ ಬಂದು ಪ್ರಹಸನ ಮಾಡುತ್ತಿರುವುದು ನಾಗರಿಕರಲ್ಲಿ ಗೊಂದಲಕ್ಕೆ ಕಾರಣವಾಗಿದೆ.

ಬಿಜೆಪಿ ಮಾಡುತ್ತಿರುವ ಆರೋಪವು ಸತ್ಯಕ್ಕೆ ದೂರವಾದದ್ದು ಎಂದು ಕಾಂಗ್ರೆಸ್ ನಾಯಕರು ಪ್ರತಿಕ್ರಿಯಿಸಿದ್ದಾರೆ. ''ಮೆಟ್ರೋ ಪ್ರಯಾಣ ದರ ಪರಿಷ್ಕರಣೆ ಕೇಂದ್ರ ಸರ್ಕಾರದ್ದು. ನಾವೆಂದಿಗೂ ದರ ಏರಿಕೆ ಮಾಡಿಲ್ಲ'' ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿರುಗೇಟು ಕೊಟ್ಟಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯನವರೂ ಪ್ರತಿಕ್ರಿಯಿಸಿ ''ಅಸಮರ್ಪಕ ತೆರಿಗೆ ಹಂಚಿಕೆ, ನ್ಯಾಯಯುತ ಅನುದಾನದ ನಿರಾಕರಣೆ, ಮೂಲಭೂತ ಸೌಲಭ್ಯಗಳಿಗೆ ಬೆಂಬಲ ನೀಡುವಲ್ಲಿ ಅನುಸರಿಸುತ್ತಿರುವ ವಿಳಂಬ ನೀತಿ ಮತ್ತು ಈಗ ಸಾಮಾನ್ಯ ಜನರ ಮೇಲೆ ಹೊರೆ ಹಾಕುವ ಮೆಟ್ರೋ ದರಗಳು, ಇವೆಲ್ಲವೂ ಕನ್ನಡಿಗರನ್ನು ಶೋಷಣೆಗೊಳಿಪಡಿಸಲು ಕೇಂದ್ರ ಸರ್ಕಾರದ ಅಸ್ತ್ರಗಳಾಗಿವೆ'' ಎಂದು ಆರೋಪಿಸಿದ್ದಾರೆ.

ಮೆಟ್ರೋ ದರ ಏರಿಕೆ ಅಥವಾ ಪರಿಷ್ಕರಣೆಯ ಬಗ್ಗೆ ಪದೇ ಪದೇ ಗೊಂದಲ ಸೃಷ್ಟಿಯಾಗುತ್ತಿದೆ. ಸತ್ಯಾಸತ್ಯತೆಯನ್ನು ಬಿಟ್ಟು ರಾಜಕೀಯ ಮಾಡುವುದೇ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಬಂಡವಾಳವಾಗಿದೆ. ಜನರ ಅಹವಾಲಿಗೆ ಕಿವಿಯಾಗಬೇಕಿರುವ ಜವಾಬ್ದಾರಿಯನ್ನು ಸರ್ಕಾರಗಳು ಮರೆತಂತಿದೆ.

ಮೆಟ್ರೋ ದರ ಏರಿಕೆ ಯಾರ ಹೊಣೆ?

ಮೆಟ್ರೋ ರೈಲ್ವೆ ಕಾರ್ಯಚರಣೆ ಮತ್ತು ನಿರ್ವಹಣಾ ಕಾಯ್ದೆ 2002ರ ಪ್ರಕಾರ ಮೆಟ್ರೋ ದರಗಳನ್ನು ಏರಿಕೆ ಮಾಡುವುದು ಅಥವಾ ಪರಿಷ್ಕರಣೆ ಮಾಡುವುದು ಕೇಂದ್ರ ಸರ್ಕಾರದ ವಸತಿ ಹಾಗೂ ನಗರ ವ್ಯವಹಾರಗಳ ಸಚಿವಾಲಯದ ಮೂಲಕ ರಚಿಸಲಾದ ಸ್ವತಂತ್ರ ಶುಲ್ಕ ನಿಗದಿ ಸಮಿತಿ (ಎಫ್‌ಎಫ್‌ಸಿ) ಯ ಜವಾಬ್ದಾರಿಯಾಗಿರುತ್ತದೆ. ಕೇಂದ್ರ ನಗರ ವ್ಯವಹಾರಗಳ ಸಚಿವಾಲಯವೇ ಅಂತಿಮ ನಿರ್ಧಾರವನ್ನು ಕೈಗೊಳ್ಳುತ್ತದೆ.

ದರ ನಿಗದಿ ಸಮಿತಿ ಶಿಫಾರಸು ಮಾಡಿದ ಅವಧಿಯೊಳಗೆ ಮೆಟ್ರೋ ಆಡಳಿತವು ಒಪಲೇಬೇಕಿದೆ ಮತ್ತು ಜಾರಿ ಮಾಡಬೇಕು. ಆದರೆ, ರಾಜ್ಯಸರ್ಕಾರಕ್ಕೆ ಅಥವಾ ಬಿಎಂಆರ್‌ಸಿಎಲ್‌ಗೆ ಶಿಫಾರಸುಗಳನ್ನು ರದ್ದುಗೊಳಿಸುವ ಅಥವಾ ಉಲ್ಲಂಘಿಸುವ ಕಾನೂನಾತ್ಮಕ ಅಧಿಕಾರವಿರುವುದಿಲ್ಲ. ಜೊತೆಗೆ ರಾಜ್ಯ ಸರ್ಕಾರ ಮೆಟ್ರೋ ದರ ನಿಗದಿ ಆಗಲಿ ಅಥವಾ ಪರಿಷ್ಕರಣೆ ಆಗಲಿ ಮಾಡಲು ಬರುವುದಿಲ್ಲ.

ದರ ನಿಗದಿ ಸಮಿತಿಯನ್ನು ಕೇಂದ್ರ ಸರ್ಕಾರವೇ ರಚಿಸುತ್ತದೆ. ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿಯವರು ಸಮಿತಿಯ ಮುಖ್ಯಸ್ಥರಾಗಿರುತ್ತಾರೆ. ಸಂಪೂರ್ಣ ಸಮಿತಿಯು ಕೇಂದ್ರ ಸರ್ಕಾರದ ನಿಯಮಗಳ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುತ್ತದೆ. ಸಂಸತ್ತಿನಲ್ಲಿ ಕೇಂದ್ರದ ಸಚಿವರೇ ಶಿಫಾರಸುಗಳಿಗೆ ಅನುಮತಿ ನೀಡಿರುತ್ತಾರೆ.

ಪ್ರತಿಕ್ರಿಯೆ

ವಕೀಲರು, ಸಾಮಾಜಿಕ ಕಾರ್ಯಕರ್ತರಾದ ವಿನಯ್ ಶ್ರೀನಿವಾಸ್ ಈ ದಿನ ಜೊತೆ ಮಾತನಾಡಿ, ''ಮೆಟ್ರೋ ದರ ಏರಿಕೆಗೆ ರಾಜ್ಯ ಮತ್ತು ಕೇಂದ್ರದ ಒಕ್ಕೂಟ ಸರ್ಕಾರಗಳು ಜವಾಬ್ದಾರಿಯನ್ನು ತೆಗೆದುಕೊಳ್ಳಬೇಕು. ಮೆಟ್ರೋ ಬೋರ್ಡ್‌ನಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರದವರೇ ಇರುತ್ತಾರೆ. ಯೋಜನೆ ಯಶಸ್ವಿಯಾದಾಗ ತಮ್ಮದು ಹೇಳಿಕೊಳ್ಳುವ ಸರ್ಕಾರಗಳು, ದರ ಏರಿಕೆ ಆದಾಗಲೂ ಸಹ ಜವಾಬ್ದಾರಿಯಿಂದ ವರ್ತಿಸಬೇಕು'' ಎಂದು ಆಗ್ರಹಿಸಿದರು.

''ಮೆಟ್ರೋ ಯೋಜನೆ ತಡವಾಗಿರುವುದೇ, ದರ ಏರಿಕೆಗೆ ಕಾರಣ. ತಡ ಆಗಿರುವುದಕ್ಕೆ ಸರ್ಕಾರಗಳೇ ನೇರ ಹೊಣೆ. ಮೆಟ್ರೋ ಮೊದಲ ಹಂತದ ಯೋಜನೆ ಆರಂಭವಾದಾಗ 6,500 ಕೋಟಿ ಎಂದಿದ್ದವರು ಮುಗಿಯುವ ಹಂತದಲ್ಲಿ 14,000 ಕೋಟಿಗೆ ತಂದಿದ್ದರು. ಅದೇ ರೀತಿ ಎರಡನೇ ಹಂತದಲ್ಲಿ 26,000 ಕೋಟಿಯಿಂದ 40,000 ಕೋಟಿಗೆ ಬಂದಿದೆ. ಇದಕ್ಕೆ ಜವಾಬ್ದಾರರು ಯಾರು?'' ಎಂದು ಪ್ರಶ್ನಿಸಿದರು.

''ಕೇಂದ್ರದ ಬಿಜೆಪಿ ಮತ್ತು ರಾಜ್ಯದ ಕಾಂಗ್ರೆಸ್ ಸರ್ಕಾರವು ಒಬ್ಬರೊನ್ನಬ್ಬರ ಮೇಲೆ ದೋಷಾರೋಪಣೆ ಮಾಡಿ ಜನರನ್ನು ದಿಕ್ಕು ತಪ್ಪಿಸುತ್ತಿದ್ದಾರೆ. ಮೆಟ್ರೋ ದರ ಏರಿಕೆಯ ಜೊತೆಗೆ, ಕಡಿಮೆ ಹಣದಲ್ಲಿ ಮೆಟ್ರೋವನ್ನು ಹೇಗೆ ಪ್ರಯಾಣಿಕರಿಗೆ ಒದಗಿಸಬಹುದು ಎಂಬ ಬಗ್ಗೆ ಸಾರ್ವಜನಿಕ ಚರ್ಚೆ ಅಗತ್ಯವಿದೆ'' ಎಂದು ಅಭಿಪ್ರಾಯಪಟ್ಟರು.

ಈ ಹಿಂದೆ ಆಗಿದ್ದ ಮೆಟ್ರೋ ದರ ಏರಿಕೆ

2011ರಲ್ಲಿ 6.4 ಕಿ.ಮೀ ಉದ್ದದಷ್ಟು ಆರಂಭವಾದ ಬೆಂಗಳೂರಿನ ನಮ್ಮ ಮೆಟ್ರೋ ಮುಂದಿನ 15 ವರ್ಷಗಳಲ್ಲಿ 90 ಕಿ.ಮೀ.ಗಿಂತ ಹೆಚ್ಚು ದೂರವನ್ನೂ ಹಾಗೂ 80ಕ್ಕೂ ಹೆಚ್ಚು ನಿಲ್ದಾಣಗಳನ್ನು ತಲುಪುವ ಮಟ್ಟಕ್ಕೆ ಬಂದಿದೆ.

ಎಫ್‌ಎಫ್‌ಸಿ ಶಿಫಾರಸ್ಸಿನ ನಂತರ 2017 ಮತ್ತು 2025ರಲ್ಲಿ ಎರಡು ಬಾರಿ ಮಾತ್ರ ಮೆಟ್ರೋ ದರಗಳನ್ನು ಹೆಚ್ಚಿಸಲಾಗಿದೆ. ಎಫ್‌ಎಫ್‌ಸಿ ತನ್ನ ವರದಿಯಲ್ಲಿ ಸಿಬ್ಬಂದಿಯ ವೆಚ್ಚಗಳು, ಇಂಧನ ವೆಚ್ಚಗಳು, ನಿರ್ವಹಣಾ ವೆಚ್ಚವು 450 ಪ್ರತಿಶತಕ್ಕಿಂತ ಹೆಚ್ಚಾಗಿರುವುದರಿಂದ ಮೆಟ್ರೋ ದರ ಏರಿಕೆ ಮಾಡಲಾಗುತ್ತಿದೆ ಎಂದು ತಿಳಿಸಿದೆ.

ಪ್ರಸ್ತುತ ಬೆಂಗಳೂರು ಮೆಟ್ರೋ ದರ ಎರಡು ಕಿಲೋ ಮೀಟರ್‌ಗಳವರೆಗೆ 10 ರೂಪಾಯಿ ಹಾಗೂ 25 ಕಿ.ಮೀ.ಗಿಂತ ಹೆಚ್ಚಿನ ಪ್ರಯಾಣಕ್ಕೆ ಗರಿಷ್ಠ 90ರೂಪಾಯಿ ಶುಲ್ಕ ನಿಗದಿಯಾಗಿದೆ. ಈಗ ಬಂದಿರುವ ಹೊಸ ದರ ಪರಿಷ್ಕರಣೆಯ ಪ್ರಕಾರ, ಈ ದರಗಳು ಕ್ರಮವಾಗಿ 11 ರೂಪಾಯಿ ಮತ್ತು 95 ರೂಪಾಯಿಗೆ ಏರಿಕೆಯಾಗುವ ಸಾಧ್ಯತೆಯಿದೆ.

ಈ ತೀರ್ಮಾನವು ಕಳೆದ ವರ್ಷ ಏರಿಕೆಯಾಗಿದ್ದ ಮೆಟ್ರೋ ದರದ ಬಗ್ಗೆ ಗಮನ ಸೆಳೆದಿದೆ. 2025 ಫೆ.09 ರಂದು ಬಿಎಂಆರ್‌ಸಿಎಲ್ ಶೇ100 ರಷ್ಟು ಏರಿಕೆಗೆ ಆದೇಶ ಹೊರಡಿಸಿತ್ತು. ಇದರ ವಿರುದ್ಧ ತೀವ್ರತರವಾದ ಪ್ರತಿಭಟನೆಗಳು ನಡೆದವು. ವ್ಯಾಪಕ ಪ್ರತಿಭಟನೆಯ ಬಳಿಕ ಶೇ71 ರಷ್ಟು ಏರಿಕೆ ಮಾಡುವ ತೀರ್ಮಾನ ಮಾಡಿತು.ಈ ವರ್ಷದಂತೆ ಕಳೆದ ವರ್ಷವೂ ರಾಜಕೀಯ ಪ್ರಹಸನಗಳಿಗೆ ಮೆಟ್ರೋ ದರ ಪರಿಷ್ಕರಣೆ ಕಾರಣವಾಗಿತ್ತು.

ಮೊದಲು ಗರಿಷ್ಠ 60 ರೂಪಾಯಿ ಇದ್ದ ಮೆಟ್ರೋ ದರ ಕಳೆದ ವರ್ಷದ ಪರಿಷ್ಕರಣೆಯ ನಂತರ 90 ರೂಪಾಯಿಗೆ ಜಿಗಿಯಿತು. ಮೆಟ್ರೋ ಕಾರ್ಡ್‌ಗಳಿಗೆ ಕನಿಷ್ಠ 50ರೂಪಾಯಿಂದ 90 ರೂಪಾಯಿಗೆ ಹೆಚ್ಚಿಸಲಾಯಿತು.

ಒಟ್ಟಾರೆಯಾಗಿ ಮೆಟ್ರೋ ದರ ಏರಿಕೆಯ ಬಗ್ಗೆ ರಾಜ್ಯದ ಸಂಸದರು ಸಂಸತ್ತಿನಲ್ಲಿ ಪ್ರಶ್ನೆ ಮಾಡುವ ಬದಲು ರಾಜ್ಯದಲ್ಲಿ ಪ್ರಯಾಣಿಕರ ದಿಕ್ಕು ತಪ್ಪಿಸುವ ರೀತಿಯಲ್ಲಿ ನಡೆದುಕೊಳ್ಳುತ್ತಿದ್ದಾರೆ. ಸರಿಯಾಗಿ ಸಮರ್ಥಿಸಿಕೊಳ್ಳಲು ರಾಜ್ಯ ಸರ್ಕಾರವೂ ಸಹ ಹರಸಾಹಸ ಪಡುತ್ತಿದೆ.

ಹೋರಾಟದ ಹಕ್ಕು ಹಿಂದೂಗಳಿಗೆ ಮಾತ್ರವೇ?; ವಿವಾದ ಸೃಷ್ಟಿಸಿದ ಮೋಹನ್ ಭಾಗ್ವತ್ ಹೇಳಿಕೆ!

ಬಾಂಗ್ಲಾದೇಶದ ಹಿಂದುಗಳು ತಮ್ಮ ಹಕ್ಕುಗಳಿಗಾಗಿ ಸಂಘಟಿತರಾಗಬೇಕು ಎನ್ನುವುದು ತಪ್ಪಲ್ಲ. ಆದರೆ ಇದೇ ಹೋರಾಟದ ಹಕ್ಕು ಭಾರತದ ಮುಸಲ್ಮಾನರಿಗೆ ಬಂದಾಗ, ಅದು ಶಂಕೆಯ ದೃಷ್ಟಿಯಿಂದಲೇ ಯಾಕೆ ನೋಡಲ್ಪಡುತ್ತದೆ ಎಂಬ ಪ್ರಶ್ನೆ ಅನಿವಾರ್ಯ.

ಫೆಬ್ರವರಿ 8 ರಂದು ಮುಂಬೈನಲ್ಲಿ ಆರ್‌ಎಸ್‌ಎಸ್‌ನ 100 ವರ್ಷಗಳ ಸಂಭ್ರಮದಲ್ಲಿ ಮಾತನಾಡುತ್ತಾ ರಾಷ್ಟ್ರೀಯ ಸ್ವಯಂಸೇವಕ ಸಂಘದ ಸರಸಂಘಚಾಲಕ ಮೋಹನ್ ಭಾಗವತ್ ಅವರು ಒಂದು ದೊಡ್ಡ ಹೇಳಿಕೆ ನೀಡಿದರು. ''ಬಾಂಗ್ಲಾದೇಶದ ಹಿಂದು ಜನಸಂಖ್ಯೆಯು ತನ್ನ ಹಕ್ಕುಗಳಿಗಾಗಿ ನಿಂತು ಹೋರಾಡಲು ನಿರ್ಧರಿಸಿದರೆ, ತಿರುಗಿ ನಿಂತರೆ ಅವರಿಗೆ ಪ್ರಪಂಚದಾದ್ಯಂತ ಹಿಂದುಗಳ ಬೆಂಬಲ ಸಿಗುತ್ತದೆ'' ಎಂದು ಹೇಳಿದ್ದಾರೆ. ''ಬಾಂಗ್ಲಾದೇಶದಲ್ಲಿ ಸುಮಾರು 1.25 ಕೋಟಿ ಹಿಂದೂಗಳಿದ್ದಾರೆ. ಅವರು ಅಲ್ಲಿಯೇ ಇದ್ದು ಹೋರಾಡಲು ನಿರ್ಧರಿಸಿದರೆ, ಪ್ರಪಂಚದಾದ್ಯಂತದ ಎಲ್ಲಾ ಹಿಂದುಗಳು ಅವರಿಗೆ ಖಂಡಿತ ಸಹಾಯ ಮಾಡುತ್ತಾರೆ'' ಎಂದು ಮುಂಬೈನಲ್ಲಿ ನಡೆದ ಆರ್‌ಎಸ್‌ಎಸ್ ಉಪನ್ಯಾಸ ಸರಣಿಯ ಎರಡನೇ ದಿನವನ್ನುದ್ದೇಶಿಸಿ ಮೋಹನ್ ಭಾಗವತ್ ಹೇಳಿದರು.

ಈ ಮಾತುಗಳು ವಿಶ್ವದಾದ್ಯಂತ ಸುದ್ದಿಯಾದವು. ಮೋಹನ್ ಭಾಗವತ್ ಅವರು ಹೇಳಿದಂತೆ, ಹಿಂದುಗಳು ಓಡಿಹೋಗದೆ ಅಲ್ಲಿಯೇ ನಿಂತು ಹೋರಾಡುತ್ತಿದ್ದಾರೆ ಎಂದು ಅವರು ಹೇಳಿದರು. ಅವರ ಒಗ್ಗಟ್ಟು, ರಾಜಕೀಯ ವ್ಯವಸ್ಥೆಯನ್ನು ತಮ್ಮ ಪರವಾಗಿ ಬಳಸಿಕೊಳ್ಳುವುದು ಅಗತ್ಯ ಅಂತಲೂ ಕರೆ ನೀಡಿದರು.

ಆದರೆ, ಇಲ್ಲೊಂದು ಪ್ರಶ್ನೆ ಉದ್ಭವಿಸುತ್ತದೆ. ಮೋಹನ್ ಭಾಗವತ್ ಅವರೇ, ಬಾಂಗ್ಲಾದೇಶದ ಹಿಂದುಗಳು ಹೋರಾಡಬೇಕು ಎಂದು ನೀವು ಹೇಳುತ್ತೀರಿ. ಅದು ಸರಿ. ಆದರೆ ಭಾರತದಲ್ಲಿ ಮುಸಲ್ಮಾನರು ತಮ್ಮ ಹಕ್ಕುಗಳಿಗಾಗಿ, ಅನ್ಯಾಯಕ್ಕೆ ವಿರುದ್ಧವಾಗಿ ಧ್ವನಿ ಎತ್ತಿದಾಗ ಅವರನ್ನು ''ದೇಶದ್ರೋಹಿಗಳು'', ''ಪಾಕಿಸ್ತಾನ ಪ್ರೀತಿಗಳು'', ''ಜಿಹಾದಿಗಳು'' ''ಟುಕ್‌ಡೆ ಟುಕ್‌ಡೆ ಗ್ಯಾಂಗ್'' ಎಂದು ಆರೋಪಿಸುತ್ತೀರಿ. ಅವರು ಮೌನವಾಗಿರಬೇಕೇ? ಅವರ ಧ್ವನಿ ಸತ್ತಂತೆ ಇರಬೇಕೇ?

ಅಲ್ಪಸಂಖ್ಯಾತರು ಹೋರಾಡುವುದು ಜನತಾಂತ್ರಿಕ ಹಕ್ಕು. ಇದು ಯಾವುದೇ ರಾಷ್ಟ್ರದ ಸಂವಿಧಾನಾತ್ಮಕ ಮೂಲಭೂತತೆಯ ಭಾಗ. ಬಾಂಗ್ಲಾದೇಶದ ಹಿಂದುಗಳು ತಮ್ಮ ಹಕ್ಕುಗಳಿಗಾಗಿ ಸಂಘಟಿತರಾಗಬೇಕು ಎನ್ನುವುದು ತಪ್ಪಲ್ಲ. ಆದರೆ ಇದೇ ಹೋರಾಟದ ಹಕ್ಕು ಭಾರತದ ಮುಸಲ್ಮಾನರಿಗೆ ಬಂದಾಗ, ಅದು ಶಂಕೆಯ ದೃಷ್ಟಿಯಿಂದಲೇ ಯಾಕೆ ನೋಡಲ್ಪಡುತ್ತದೆ ಎಂಬ ಪ್ರಶ್ನೆ ಅನಿವಾರ್ಯ.

1947ರ ವಿಭಜನೆಯ ಸಂದರ್ಭದಲ್ಲಿ ಪೂರ್ವ ಬಂಗಾಳದಲ್ಲಿ (ಈಗಿನ ಬಾಂಗ್ಲಾದೇಶ) ಹಿಂದುಗಳು ಸುಮಾರು 28% ಇದ್ದರು. 2022ರ ಜನಗಣತಿಯ ಪ್ರಕಾರ ಈಗ 7.95% ಮಾತ್ರ, ಸುಮಾರು 1.31 ಕೋಟಿ. ಅಂದರೆ 75 ವರ್ಷಗಳಲ್ಲಿ ಸಂಖ್ಯೆ ಅರ್ಧಕ್ಕೂ ಕಡಿಮೆಯಾಗಿದೆ. ದೇವಾಲಯಗಳ ಮೇಲೆ ದಾಳಿ, ಭೂಮಿ ಅಪಹರಣ, ಮಹಿಳೆಯರ ಮೇಲೆ ಅತ್ಯಾಚಾರ, ಕೊಲೆಗಳು ಇವುಗಳು ಹೊಸ ವಿಷಯವಲ್ಲ. ಹಿಂದು ಬೌದ್ಧ ಕ್ರಿಶ್ಚಿಯನ್ ಐಕ್ಯ ಪರಿಷತ್ ಪ್ರಕಾರ 2024ರಲ್ಲಿ 2000ಕ್ಕೂ ಹೆಚ್ಚು ಘಟನೆಗಳು ನಡೆದಿವೆ. ಇದು ನಿಜ. ಆದರೆ ಇದೇ ದೇಶದಲ್ಲಿ ಮುಸಲ್ಮಾನರು ಬಹುಸಂಖ್ಯಾತರಾಗಿದ್ದರೂ ಅಲ್ಲಿ ಹಿಂದುಗಳು ''ಹೋರಾಡಬೇಕು'' ಎಂದು ಮೋಹನ್ ಭಾಗವತ್ ಹೇಳುತ್ತಾರೆ. ಇದು ಸರಿ.

ಭಾರತದಲ್ಲಿ ಮುಸಲ್ಮಾನರು ಸುಮಾರು 20 ಕೋಟಿಗೂ ಹೆಚ್ಚು. ಅವರು ದೇಶದ ಪ್ರಜೆಗಳು. ಆದರೆ ಕಳೆದ ಹತ್ತು ವರ್ಷಗಳಲ್ಲಿ ಮುಸ್ಲಿಂಮರ ಮೇಲೆ ಲಿಂಚಿಂಗ್, ಗೋರಕ್ಷಣೆ ಹೆಸರಲ್ಲಿ ದಾಳಿ, ಸಾಮೂಹಿಕ ಹಲ್ಲೆ, - ವಿರೋಧಿ ಪ್ರತಿಭಟನೆಗಳಲ್ಲಿ ಪೊಲೀಸ್ ದೌರ್ಜನ್ಯ, ಬುಲ್ಡೋಜರ್ ನ್ಯಾಯ ಇವುಗಳು ಸಾಮಾನ್ಯವಾಗಿವೆ. ಅವರು ತಮ್ಮ ಹಕ್ಕುಗಳಿಗಾಗಿ ಧ್ವನಿ ಎತ್ತಿದಾಗ ''ಅಂತರರಾಷ್ಟ್ರೀಯ ಒಳಸಂಚು'', ''ಜಿಹಾದ್'', ''ಪಾಪ್ಯುಲೇಷನ್ ಜಿಹಾದ್'' ಎಂದು ಆರೋಪಿಸಲಾಗುತ್ತದೆ.

ಮೋಹನ್ ಭಾಗವತ್ ಅವರ ಸಂಘ ಪರಿವಾರವೇ ''ಅಖಂಡ ಭಾರತ''ದ ಕನಸು ಕಾಣುತ್ತದೆ. ಆದರೆ ಬಾಂಗ್ಲಾದೇಶದಲ್ಲಿ ಹಿಂದುಗಳು ಹೋರಾಡಬೇಕು ಎಂದು ಹೇಳುವ ಅದೇ ಸಂಘ, ಭಾರತದಲ್ಲಿ ಮುಸಲ್ಮಾನರು ತಮ್ಮ ಧರ್ಮ, ಸಂಸ್ಕೃತಿ, ಹಕ್ಕುಗಳನ್ನು ರಕ್ಷಿಸಲು ಹೋರಾಡುವುದನ್ನು ''ವಿಭಜನೆ'' ಎಂದು ಕರೆಯುತ್ತದೆ. ಇದು ಏಕೆ?

ಒಂದು ಕಡೆ ಬಹುಸಂಖ್ಯಾತ ದೇಶದಲ್ಲಿ ಅಲ್ಪ ಸಂಖ್ಯಾತರು ಹೋರಾಡಬೇಕು ಎಂದು ಪ್ರೋತ್ಸಾಹಿಸುವುದು, ಮತ್ತೊಂದು ಕಡೆ ಹಿಂದು ಬಹುಸಂಖ್ಯಾತ ದೇಶದಲ್ಲಿ ಅಲ್ಪ ಸಂಖ್ಯಾತರು ಮೌನವಾಗಿರಬೇಕು ಎಂದು ಹೇಳುವುದು, ಇದು ನ್ಯಾಯವೇ?

ಇನ್ನೂ ದೊಡ್ಡ ಪ್ರಶ್ನೆ ಎಂದರೆ, ಅಲ್ಪಸಂಖ್ಯಾತರ ನೋವು ಗಡಿಯಿಂಥ ಗಡಿಗೆ ಬದಲಾಗುತ್ತದೆಯೇ ಎಂಬುದು. ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲೆ ದೌರ್ಜನ್ಯ ನಡೆದರೆ, ಅದು ಮಾನವ ಹಕ್ಕುಗಳ ಪ್ರಶ್ನೆಯಾಗುತ್ತದೆ. ಭಾರತದಲ್ಲಿ ಮುಸಲ್ಮಾನರ ಮೇಲೆ ದೌರ್ಜನ್ಯ ನಡೆದರೆ, ಅದು ಬರೀ ಘಟನೆ ಎಂದು ಮುಚ್ಚಿ ಹಾಕುವ ಎಲ್ಲಾ ಪ್ರಯತ್ನಗಳು ನಡೆಯುತ್ತವೆ. ಅಲ್ಪಸಂಖ್ಯಾತರಿಗೆ ಹೋರಾಟದ ಹಕ್ಕು ಧರ್ಮದ ಆಧಾರದಲ್ಲಿ ಬದಲಾಗುತ್ತದೆಯೇ? ಹೌದು ಎಂದಾದರೆ, ಅದು ಸಂವಿಧಾನದ ಸೋಲು. ಇಲ್ಲ ಎಂದಾದರೆ, ಆ ಸಮಾನತೆಯನ್ನು ಎಲ್ಲರಿಗೂ ಅನ್ವಯಿಸಬೇಕು.

ಆರ್‌ಎಸ್‌ಎಸ್‌ನ ತತ್ವವೇ ಹಿಂದುತ್ವವನ್ನು ರಾಷ್ಟ್ರೀಯತೆಯೊಂದಿಗೆ ಗುರುತಿಸುವುದು. ಮುಸಲ್ಮಾನರನ್ನು ''ಅನ್ಯ'' ಎಂದು ನೋಡುವುದು ಅದರ ಮೂಲದಲ್ಲೇ ಇದೆ. ಆದ್ದರಿಂದ ಬಾಂಗ್ಲಾದೇಶದ ಹಿಂದುಗಳು ''ನಮ್ಮವರು'', ಅವರ ಹೋರಾಟ ''ರಾಷ್ಟ್ರೀಯ ಹೋರಾಟ''. ಆದರೆ ಭಾರತದ ಮುಸಲ್ಮಾನರು ''ನಮ್ಮವರು'' ಅಲ್ಲ, ಅವರ ಹೋರಾಟ ''ವಿಭಜನಾವಾದ''.

ಆದರೆ ಇದು ಯಾರಿಗೂ ಒಳ್ಳೆಯದಲ್ಲ. ಬಾಂಗ್ಲಾದೇಶದಲ್ಲಿ ಹಿಂದುಗಳು ನಿಜವಾಗಿಯೂ ಭಯಭೀತರಾಗಿದ್ದಾರೆ. ಭಾರತದಲ್ಲಿ ಮುಸಲ್ಮಾನರು ಅಸುರಕ್ಷಿತರಾಗಿದ್ದಾರೆ. ಇಬ್ಬರೂ ಪ್ರಜೆಗಳು. ಇಬ್ಬರೂ ಸಮಾನ ಹಕ್ಕುಗಳನ್ನು ಹೊಂದಿದ್ದಾರೆ. ಭಾರತ ಒಂದು ಧರ್ಮಾಧಾರಿತ ರಾಷ್ಟ್ರವಲ್ಲ. ಇದು ಸಂವಿಧಾನಾಧಾರಿತ ಪ್ರಜಾಸತ್ತಾತ್ಮಕ ರಾಷ್ಟ್ರ. ಇಲ್ಲಿ ಹೋರಾಟ, ಪ್ರತಿಭಟನೆ, ಅಭಿವ್ಯಕ್ತಿ ಎಲ್ಲವೂ ಮೂಲಭೂತ ಹಕ್ಕುಗಳು. ಭಾರತದ ಮುಸಲ್ಮಾನರು ದೇಶಕ್ಕಾಗಿ ಹೋರಾಡಿದ್ದಾರೆ, ಸ್ವಾತಂತ್ರ್ಯ ಚಳವಳಿಯಲ್ಲಿ ಭಾಗವಹಿಸಿದ್ದಾರೆ, ಸೇನೆ, ವಿಜ್ಞಾನ, ಕಲೆ, ಸಾಹಿತ್ಯ ಎಲ್ಲ ಕ್ಷೇತ್ರಗಳಲ್ಲೂ ಕೊಡುಗೆ ನೀಡಿದ್ದಾರೆ. ಆದರೂ, ಅವರ ದೇಶಭಕ್ತಿಯ ಮೇಲೆ ಸದಾ ಅನುಮಾನ.

ಮೋಹನ್ ಭಾಗವತ್ ಅವರೇ, ನೀವು ಬಾಂಗ್ಲಾದೇಶದ ಹಿಂದುಗಳಿಗೆ ''ಹೋರಾಡಿ'' ಎಂದು ಹೇಳಿದಂತೆ, ಭಾರತದ ಮುಸಲ್ಮಾನರಿಗೂ ''ನಿಮ್ಮ ಹಕ್ಕುಗಳಿಗಾಗಿ ಧ್ವನಿ ಎತ್ತಿ, ಆದರೆ ಸಂವಿಧಾನದ ಚೌಕಟ್ಟಿನಲ್ಲಿ'' ಎಂದು ಹೇಳೋಕೆ ಸಾಧ್ಯವಿಲ್ಲವೇ? ಅಥವಾ ಅವರು ಮೌನವಾಗಿರಬೇಕೇ? ಸಮಾಜದಲ್ಲಿ ಶಾಂತಿ ಬೇಕಾದರೆ ಎಲ್ಲರೂ ಸಮಾನರಾಗಿ ಜೀವಿಸಬೇಕು. ಒಂದು ಕಡೆ ಪ್ರೋತ್ಸಾಹ, ಮತ್ತೊಂದು ಕಡೆ ಮೌನ. ಇದೆಂಥಾ ನ್ಯಾಯ? ಅಲ್ಪ ಸಂಖ್ಯಾತರ ಹಕ್ಕುಗಳನ್ನು ರಕ್ಷಿಸುವುದು ಮುಖ್ಯ. ಆದರೆ ಅದು ಎಲ್ಲರಿಗೂ ಅನ್ವಯಿಸಬೇಕು. ಭಾರತದ ಮುಸಲ್ಮಾನರಿಗೂ ಅದೇ ಹಕ್ಕು ಇದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR